ಸಂಪುಟ : 10 ಸಂಚಿಕೆ: 232 ಪುಟ : 4+2 ಬೆಲೆ: 3.00 ರವಿವಾರ ಅಕ್ಟೋಬರ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 232 Pages : 4+2 Price : 3.00 Sunday October 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲಾ ಮಟ್ಟದ ಪದವಿಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಯುವ ಶಕ್ತಿ ದೇಶದ ಭವಿಷ್ಯ ರೂಪಿಸುತ್ತದೆ



> ಗದಗ ಜಿಲ್ಲೆಯ ವಿದ್ಯಾರ್ಥಿಗಳು ಕ್ರೀಡೆ ಮತ್ತು ವಿದ್ಯಾಭ್ಯಾಸದಲ್ಲಿ ರಾಜ್ಯಕ್ಕೆ ಮಾದರಿಯಾಗಬೇಕು. ಉತ್ತಮ ಪ್ರದರ್ಶನ ನೀಡಿ ರಾಜ್ಯ ಮಟ್ಟದಲ್ಲಿಯೂ ಜಿಲ್ಲೆ ಮುಂಚೂಣಿಯಲ್ಲಿರಬೇಕು. ಗದಗ ಜಿಲ್ಲೆಯು ಕಬ್ಬಡ್ಡಿ, ಹಾಕಿ, ಅಥ್ಲೆಟಿಕ್, ಫುಟ್ಬಾಲ್ ಕ್ರೀಡೆಗಳಲ್ಲಿ ಮಹತ್ವದ ಸಾಧನೆ ಮಾಡುವ ಮೂಲಕ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಜಿಲ್ಲೆಗೆ ಕೀರ್ತಿಯನ್ನು ತಂದುಕೊಟ್ಟಿರುವುದು ನಮ್ಮ ಹೆಮ್ಮೆ. ಜಿಲ್ಲೆಯಲ್ಲಿ ಕ್ರೀಡಾಪಟುಗಳಿಗೆ ಕೊರತೆ ಇಲ್ಲ. ಜೊತೆಗೆ, ತರಬೇತಿಗೆ ಹಾಗೂ ಕ್ರೀಡಾ ಸೌಲಭ್ಯವನ್ನು ಸರ್ಕಾರದಿಂದ ಹೆಚ್ಚು ಹೆಚ್ಚು ಒದಗಿಸಲಾಗಿದೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಕ್ರೀಡೆಗಳಲ್ಲಿ ಹೆಚ್ಚು ಪ್ರತಿಭೆಗಳಿರುವದು ನಮ್ಮ ಹೆಮ್ಮೆಯಾಗಿದೆ. ಯುವಕರು ಕ್ರೀಡಾ ಮನೋಭಾವವನ್ನು ಅಳವಡಿಸಿಕೊಂಡರೆ ಶಾರೀರಿಕ ಆರೋಗ್ಯ ಮಾತ್ರವಲ್ಲದೆ ಮಾನಸಿಕ ದೃಢತೆ ಹಾಗೂ ನಾಯಕತ್ವ ಗುಣಗಳು ಬೆಳೆಯುತ್ತವೆ. ಇಂತಹ ಯುವ ಶಕ್ತಿಯೇ ದೇಶದ ಭವಿಷ್ಯವನ್ನು ರೂಪಿಸುತ್ತದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿ ಪೂರ್ವ) ಗದಗ, ಜಗದ್ಗುರು ತೋಂಟ–ದಾರ್ಯ ವಿದ್ಯಾಪೀಠದ ತೋಂಟದ ಸಿದ್ದೇಶ್ವರ ವಿಜ್ಞಾನ ವಾಣಿಜ್ಯ ಹಾಗೂ ಕಲಾ ಪದವಿಪೂರ್ವ ಕಾಲೇಜು ಗದಗ ಇವುಗಳ ಸಹಯೋಗದಲ್ಲಿ ಶನಿವಾರ ಗದಗ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾಮಟ್ಟದ ಪ್ರಸಕ್ತ ಸಾಲಿನ ಪದವಿಪೂರ್ವ ಮಹಾವಿದ್ಯಾಲಯಗಳ ಕ್ರೀಡಾಕೂಟದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಕ್ರೀಡೆಯು ಯುವಕರಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸುತ್ತದೆ. ಸೋಲಿನಲ್ಲಿ ಸಹ ಕಲಿಯುವ ನೈತಿಕತೆ, ಗೆಲುವಿನಲ್ಲಿ ಸಹ ವಿನಮ್ರತೆ ಇರಬೇಕೆಂಬ ಗುಣ ಕ್ರೀಡೆಯಿಂದಲೇ ಬರುತ್ತದೆ. ವಿದ್ಯಾರ್ಥಿಗಳು ಕೇವಲ ಪಠ್ಯ ವಿಷಯಗಳಲ್ಲ, ಕ್ರೀಡಾಂಗಣದಲ್ಲೂ ಸಮರ್ಥರಾಗಬೇಕು. ನಿಜವಾದ ಶಿಕ್ಷಣವು ಶರೀರ, ಮನಸ್ಸು ಹಾಗೂ ಆತ್ಮದ ಸಮತೋಲನದಲ್ಲಿದೆ ಎಂದು ಸಚಿವರು ವಿದ್ಯಾರ್ಥಿಗಳಿಗೆ ಕ್ರೀಡೋತ್ಸಾಹ ತುಂಬಿದರು.

ಯುವ ಜನರು ತಮ್ಮನ್ನು ತಾವು ಸಂಪೂರ್ಣ ತೊಡಗಿಸಿಕೊಳ್ಳುವ ಮೂಲಕ ಕ್ರೀಡಾ ಸಾಧನೆ ಮಾಡಬೇಕು. ದುಶ್ಚಟಗಳಿಂದ ಮುಕ್ತರಾಗಿ ಉತ್ತಮ ಸಮಾಜ ನಿರ್ಮಾಣದಲ್ಲಿ ಯುವಕರು ಕೈಜೋಡಿಸಬೇಕು ಎಂದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಶಿವಾನಂದ ಪಟ್ಟಣಶೆಟ್ಟಿ, ಬಸವರಾಜ ಕಡೇಮನಿ, ಯೋಗೇಶ್ ಕುಮಾರ, ಎಸ್.ಪಿ ರೋಹನ್ ಜಗದೀಶ್, ಎಡಿಸಿ ಡಾ. ದುರಗೇಶ್ ಕೆ.ಆರ್, ಎಸಿ ಗಂಗಪ್ಪ ಎಂ, ಡಿಡಿಪಿಯು ಸಿದ್ದಲಿಂಗ ಮಸನಾಯಕ, ಶರಣು ಗೋಗೇರಿ, ಕೊಟ್ರೇಶ್ ವಿಭೂತಿ, ಕೊಟ್ರೇಶ್ ಮೆಣಸಿನಕಾಯಿ ಸೇರಿದಂತೆ ವಿವಿಧ ಕಾಲೇಜುಗಳ ಪ್ರಾಚಾರ್ಯರು, ದೈಹಿಕ ಶಿಕ್ಷಕರು, ನಿರ್ಣಾಯಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

### 2025ನೇ ಸಾಲಿನ ಯುವಜನೋತ್ಸವ ಉದ್ಘಾಟಿಸಿದ ಡಾ. ಎಚ್.ಕೆ. ಪಾಟೀಲ

# ಯುವಜನೋತ್ಸವ ಭವಿಷ್ಯದ ಮೈಲಿಗಲ್ಲಾಗಲಿ



> ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟಗಳ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ, ಯುವ ಕಲಾವಿದರಿಗೆ ಸೂಕ್ತ ಗೌರವ, ಪ್ರಶಸ್ತಿಗಳನ್ನು ದೊರಕಿಸಿಕೊಡುವಲ್ಲಿ ಸಚಿವರ ಸಹಾಯವನ್ನು ಆಪೇಕ್ಷಿಸುವುದರ ಜೊತೆಗೆ ಸಚಿವರ ಮಾರ್ಗದರ್ಶನ, ನಮ್ಮ ಸಮಾರಂಭಕ್ಕೆ ಅತ್ಯಂತ ಅಗತ್ಯ. ಆ ರೀತಿಯ ಸಹಾಯ, ಸಹಕಾರ ಯಾವತ್ತೂ ಇರಲಿ ಎಂದು ಆಶಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಯುವ ಜನಾಂಗಕ್ಕೆ ಯುವಜನೋತ್ಸವ ಕೇವಲ ಮೋಜು–ಮಸ್ತಿಗಾಗಿ ಮಾತ್ರವಲ್ಲ, ಅದು ಅವರ ಉಜ್ವಲ ಭವಿಷ್ಯದ ಸೂಚಕ ಹಾಗೂ ಜೀವನ ಮೌಲ್ಯಗಳಿಗೆ ದಾರಿ ದೀಪವಾಗಬಲ್ಲದು ಎಂಬುದನ್ನು ಸಮಕಾಲೀನ ಯುವಪೀಳಿಗೆ ಅರ್ಥೈಸಿಕೊಂಡಾಗ ಯುವಜನೋತ್ಸವಕ್ಕೆ ಒಂದು ಸಾರ್ಥಕ್ಯ ಬರಲು ಸಾಧ್ಯ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ, ನಿಮ್ಹಾನ್ಸ್ ಬೆಂಗಳೂರು, ನೆಹರು ಯುವ ಕೇಂದ್ರ ಗದಗ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಗದಗ, ಲಯನ್ಸ್ ಶಿಕ್ಷಣ ಸಂಸ್ಥೆ ಗದಗ, ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯ ಗದಗ ಇವುಗಳ ಸಂಯುಕ್ತ ಆಶ್ರಯದಲ್ಲಿ ಶನಿವಾರ ಸನ್ಮಾರ್ಗ ಕಾಲೇಜಿನಲ್ಲಿ ಜರುಗಿದ 2025ನೇ ಸಾಲಿನ ಯುವಜನೋತ್ಸವವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

ಜಿಲ್ಲೆಯಲ್ಲಿ ಯುವಕ ಮಂಡಳಗಳ ಸಂಖ್ಯೆಯನ್ನು ಹೆಚ್ಚಿಸುವ, ಹಾಗೆಯೇ ಅವುಗಳ ಮೂಲಕ ರಚನಾತ್ಮಕ ಚಟುವಟಿಕೆಗಳನ್ನು ಮಾಡುವ ಉದ್ದೇಶವಿದೆ. ಅದನ್ನು ಸಾರ್ಥಕಪಡಿಸುವಲ್ಲಿ ಯುವಜನ ಸಬಲೀಕರಣ ಇಲಾಖೆ ಪ್ರಯತ್ನ ಮಾಡಲಿ ಎಂದು ಸಚಿವರು ಆಶಿಸಿದರು.

ಭವ್ಯ ಭಾರತವನ್ನು ರೂಪಿಸುವ ಯುವಜನಾಂಗ ಮಾದಕ ವಸ್ತುಗಳತ್ತ ಆಕರ್ಷಿತರಾಗದೇ ಸನ್ಮಾರ್ಗದಲ್ಲಿ ನಡೆದಾಗ ಅವರ ಉಜ್ವಲ ಭವಿಷ್ಯ ಹಾಗೂ ರಾಷ್ಟ್ರದ ಉತ್ಥಾನ ಸುಲಭ ಸಾಧ್ಯ ಎನ್ನುವ ತಮ್ಮ ಅಭಿಪ್ರಾಯಕ್ಕೆ ಸಾಕಷ್ಟು ಅಂಕಿ ಅಂಶಗಳನ್ನು ನೀಡುವ ಮೂಲಕ ಯುವಜನರ ಮನವನ್ನು ಪರಿವರ್ತಿಸುವ ಸಫಲ ಪ್ರಯತ್ನಗೈದರಲ್ಲದೆ, ಜಿಲ್ಲೆಯ ವಿವಿಧ

▶▶3ನೇ ಪುಟಕ್ಕೆ

---

### ಡಿವೈಎಸ್‌ಪಿಯಾಗಿ ಪದೋನ್ನತಿ ಹೊಂದಿದ ನಾಗರಾಜ ಮಾಡಳ್ಳಿಯವರಿಗೆ ಸನ್ಮಾನ

# ನಿಷ್ಠೆಯಿದ್ದರೆ ಸಮಾಜ ಗೌರವಿಸುತ್ತದೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪೊಲೀಸ್ ವೃತ್ತಿಯಲ್ಲಿ ಸೇವೆಗೆ ಅವಕಾಶ ದೊರಕಿರುವದು ಭಾಗ್ಯವಾಗಿದ್ದು, ಜನರಿಗೆ ರಕ್ಷಣೆ ನೀಡುವ ಕಾರ್ಯವನ್ನು ನಿಷ್ಠೆಯಿಂದ ಮಾಡುವದರಿಂದ ಸಮಾಜ ನಮ್ಮನ್ನು ಗೌರವಿಸುತ್ತದೆ. ಒಳ್ಳೆಯ ಕಾರ್ಯಗಳು ಎಂದೆಂದಿಗೂ ಜನರಿಗೆ ನೆನಪಿನಲ್ಲಿ ಉಳಿಯುತ್ತವೆ ಎಂದು ಡಿವೈಎಸ್‌ಪಿಯಾಗಿ ಪದೋನ್ನತಿ ಹೊಂದಿದ ನಾಗರಾಜ ಮಾಡಳ್ಳಿ ಹೇಳಿದರು.

ಅವರು ಪಟ್ಟಣದ ಸವಣೂರು ರಸ್ತೆಯಲ್ಲಿರುವ ಬಿಸಿಎನ್ ಸಭಾಂಗಣದಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ ಪೊಲೀಸ್ ಇಲಾಖೆ ವತಿಯಿಂದ ನೀಡಲಾದ ಗೌರವವನ್ನು ಸ್ವೀಕರಿಸಿ ಮಾತನಾಡಿದರು.

ಶಿರಹಟ್ಟಿ ಠಾಣಾ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಿಗೂ ಅಧಿಕ ಕಾಲ ಸಿಪಿಐ ಆಗಿ ಕಾರ್ಯನಿರ್ವಹಿಸಿದ್ದು, ಈ ವೇಳೆಯಲ್ಲಿ ಅನೇಕ ಪ್ರಕರಣಗಳಲ್ಲಿ ಭಾಗಿಯಾದ ಅಪರಾಧಿಗಳನ್ನು ಸೆರೆ ಹಿಡಿದಿರುವದ ಜೊತೆ ಸಾಕಷ್ಟು ಕಳ್ಳ ಮಾಲುಗಳನ್ನು ವಶಪಡಿಸಿಕೊಂಡಿದ್ದು, ಇದು ಜಿಲ್ಲಾ ಮಟ್ಟದಲ್ಲಿ ಸಾಕಷ್ಟು ಹೆಸರು ಮಾಡಿದೆ. ಉತ್ತಮವಾಗಿ ಕಾರ್ಯ ನಿರ್ವಹಿಸುವಲ್ಲಿ ಸಾರ್ವಜನಿಕರು, ಇಲಾಖೆಯ ಎಲ್ಲ ಅಧಿಕಾರಿಗಳು, ಸಿಬ್ಬಂದಿಗಳು ನೀಡಿದ ಸಹಕಾರ ಸದಾ ಸ್ಮರಣೀಯ. ಪದೋನ್ನತಿ ಹೊಂದಿ ಬೇರೆಡೆ ವರ್ಗಾವಣೆಯಾಗುತ್ತಿದ್ದು, ಮುಂದೆ ಬರುವ ಅಧಿಕಾರಿಗಳಿಗೂ ಇದೇ ರೀತಿ ಸಹಾಯ ಸಹಕಾರ ದೊರೆಯಲಿ ಎಂದರು.

ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ, ಲಕ್ಷ್ಮೇಶ್ವರ ಪಿಎಸ್‌ಐ

▶▶3ನೇ ಪುಟಕ್ಕೆ

---

### ರಾಜ್ಯ ಸರ್ಕಾರದ ಆರ್ಥಿಕ ದುಸ್ಥಿತಿ ಮುಚ್ಚಿಕೊಳ್ಳಲು ಆರೋಪ; ಬಸವರಾಜ ಬೊಮ್ಮಾಯಿ

# ಆರ್‌ಎಸ್‌ಎಸ್‌ನಿಂದ ದೂರ ಉಳಿಯುವ ಪ್ರಶ್ನೆಯೇ ಇಲ್ಲ



> ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಸಾಕಷ್ಟು ಚರ್ಚೆಗೆ ಗ್ರಾಸ ಆಗಿದೆ. ಅವರ ಹೇಳಿಕೆ ಕುರಿತು ಸಿಎಂ ತಮ್ಮದೇ ಆದ ಸ್ಪಷ್ಟೀಕರಣ ನೀಡಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಅಂತಿಮ ಅಂತಿದ್ದರು, ಯತೀಂದ್ರ ಹೇಳಿಕೆ ನೋಡಿದಾಗ ಹೈಕಮಾಂಡ್ ಎಲ್ಲಿದೆ ಅನ್ನುವ ಪ್ರಶ್ನೆ ಕಾಂಗ್ರೆಸ್‌ನಲ್ಲಿಯೇ ಉಂಟಾಗಿದೆ. ಕಾಂಗ್ರೆಸ್ ಹೈಕಮಾಂಡ್ ದೆಹಲಿಯಲ್ಲಿದೆಯಾ, ಸಿಎಂ ಕುಟುಂಬದವರ ಸುತ್ತ ಇದೆಯಾ ಎನ್ನುವ ಪ್ರಶ್ನೆ ಕಾಂಗ್ರೆಸ್‌ನಲ್ಲಿಯೇ ಮೂಡುತ್ತಿದೆ ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸರ್ಕಾರ ಆರ್ಥಿಕ ದುಸ್ಥಿತಿಯಲ್ಲಿದೆ. ಅದನ್ನು ಮುಚ್ಚಿಕೊಳ್ಳಲು ಬಿಜೆಪಿ ಸಂಸದರ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಆರ್‌ಎಸ್‌ಎಸ್ ವಿರುದ್ಧವೂ ರಾಜ್ಯ ಸರ್ಕಾರ ಮೂಲ ಸಂವಿಧಾನದ ವಿರುದ್ಧವಾಗಿ ಆದೇಶ ಮಾಡಿದ್ದು, ಇದು ಕೋರ್ಟ್‌ನಲ್ಲಿ ನಿಲ್ಲುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾವು ಆರ್‌ಎಸ್‌ಎಸ್ ಕಾರ್ಯಕ್ರಮದಿಂದ ದೂರ ಉಳಿಯುವ ಪ್ರಶ್ನೆಯೇ ಇಲ್ಲ. ಯಾರು ಪಥ ಸಂಚಲನ ಕಾರ್ಯಕ್ರಮ ಮಾಡುತ್ತಾರೋ ಅವರಿಗೆ ಅವಕಾಶ ಇದೆ. ಬೇರೆ ಸಂಘಟನೆಗಳು ಪಥ ಸಂಚಲನ ಮಾಡುವುದಿದ್ದರೆ ಮಾಡಲಿ. ಇದು ದೊಡ್ಡ ದೇಶ ಇಲ್ಲಿ ಎಲ್ಲ ಸಂಘಟನೆಗೆ ಅವಕಾಶ ಕೊಡಬೇಕು. ಪಥ ಸಂಚಲನಕ್ಕೆ ಅವಕಾಶ ಕೊಡುವ ವಿಚಾರದಲ್ಲಿ ಕೋರ್ಟ್ ಸರಿಯಾದ ತೀರ್ಮಾನ ಮಾಡಿದೆ. ಸರ್ಕಾರದ ಆದೇಶದಿಂದ ಗೊಂದಲ ಉಂಟಾಗಿದೆ ಎಂದು ಹೇಳಿದರು.

ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ದೊಣ್ಣೆಗಳನ್ನು ಬಳಸುವ ಬಗ್ಗೆ ಸಚಿವರು ಆಕ್ಷೇಪ ಎತ್ತುತ್ತಾರೆ ಎನ್ನುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪಥ ಸಂಚಲನದಿಂದ ಯಾರಿಗಾದರೂ ತೊಂದರೆಯಾಗಿದೆಯಾ? ಸರ್ಕಾರ ಸಮಾಜದಲ್ಲಿ ಕ್ಷೋಭೆ ಉಂಟುಮಾಡುವ ಕೆಲಸ ಮಾಡುತ್ತಿದೆ. ಇಷ್ಟು ವರ್ಷದಿಂದ ಸಂಘ ಪಥ ಸಂಚಲನ ಮಾಡುತ್ತಿದೆ. ಜಗತ್ತಿನಲ್ಲಿ ಎಲ್ಲರಿಗೂ ಅವರದೇ ಆದ ನಂಬಿಕೆಗಳಿವೆ. ಸರ್ಕಾರ ಅವುಗಳಿಗೆ ಧಕ್ಕೆ ತರುವ ಕೆಲಸ ಮಾಡುವುದು ಸರಿಯಲ್ಲ.

▶▶4ನೇ ಪುಟಕ್ಕೆ

---

### ಅಸಮಾನತೆಯನ್ನು ತೊಲಗಿಸಲು ಪ್ರತಿಯೊಬ್ಬರೂ ಶಿಕ್ಷಿತರಾಗಬೇಕು; ಸಿಎಂ ಸಿದ್ದರಾಮಯ್ಯ

# ದ್ವೇಷದಿಂದ ಯಾರ ಮನಸ್ಸನ್ನೂ ಗೆಲ್ಲಲು ಸಾಧ್ಯವಿಲ್ಲ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**




ವ್ಯಕ್ತಿತ್ವ ರೂಪಿಸಿಕೊಳ್ಳಲು ಶಿಕ್ಷಣ ಪಡೆಯುವುದು ಅಗತ್ಯವಾಗಿದ್ದು, ಸಮಾಜದ ಅಸಮಾನತೆಯನ್ನು ತೊಲಗಿಸಲು ಪ್ರತಿಯೊಬ್ಬರೂ ಶಿಕ್ಷಿತರಾಗಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶನಿವಾರ ಜಾಮಿಯಾ ಮಸೀದಿ ಮತ್ತು ಮುಸ್ಲಿಂ ಚಾರಿಟೇಬಲ್ ಫಂಡ್ ಟ್ರಸ್ಟ್ ನಿರ್ವಹಣೆಯ ಜೆ.ಯು ಸಮೂಹ ಸಂಸ್ಥೆಗಳ ವತಿಯಿಂದ ಜೆ.ಯು ಗ್ರೂಪ್ ಆಫ್ ಇನ್ಸ್ಟಿಟ್ಯೂಟ್‌ನಲ್ಲಿ ಆಯೋಜಿಸಲಾಗಿದ್ದ ಆಚಿಡಿಣಟ ಕಿಣಡಿಚಿಟ ಅಚಿಟಿಡಿಛಿ ಅನ್ನು ಉದ್ಘಾಟಿಸಿ ಮಾತನಾಡಿದರು.

ಯಾವುದೇ ಜಾತಿ–ಧರ್ಮಕ್ಕೆ ಸೇರಿದ್ದರೂ, ಸ್ವಾಭಿಮಾನಿ ಬದುಕಿಗೆ ಶಿಕ್ಷಣ ಅತ್ಯಂತ ಮುಖ್ಯ. ಸಾಮಾಜಿಕ ಸಂಕೋಲೆಗಳಿಂದ ಮುಕ್ತರಾಗಲು ಶಿಕ್ಷಣ ಅಗತ್ಯವೆಂದು ಡಾ. ಬಿ.ಆರ್. ಅಂಬೇಡ್ಕರ್ ತಿಳಿಸಿದ್ದಾರೆ. ಪ್ರತಿಯೊಬ್ಬ ಮುಸಲ್ಮಾನನೂ ಶಿಕ್ಷಣವಂತನಾಗಬೇಕು. ವ್ಯಕ್ತಿತ್ವ ರೂಪಿಸಿಕೊಳ್ಳಲು ಶಿಕ್ಷಣ ಪಡೆಯುವುದು ಅಗತ್ಯವಾಗಿದ್ದು, ಸಮಾಜದ ಅಸಮಾನತೆಯನ್ನು ತೊಲಗಿಸಲು ಶಿಕ್ಷಿತರಾಗಲೇಬೇಕು. ಸಂವಿಧಾನ ಅಸ್ತಿತ್ವಕ್ಕೆ ಬಂದ ನಂತರವಷ್ಟೇ ಎಲ್ಲರಿಗೂ ಶಿಕ್ಷಣ ಪಡೆಯುವ ಸಮಾನ ಅವಕಾಶ ಸಾಧ್ಯವಾಯಿತು. ಶಿಕ್ಷಣಕ್ಕೆ ಸರ್ಕಾರ ಹೆಚ್ಚು ಒತ್ತು ನೀಡಿದ್ದು, ಇದಕ್ಕಾಗಿ ಅನುದಾನವನ್ನೂ ನೀಡಲಾಗುವುದು ಎಂದರು.

> ಎಲ್ಲರೂ ವಿದ್ಯಾವಂತರಾದರೆ ಭವ್ಯ ಭಾರತ ಕಟ್ಟಬಹುದು, ಸಮ ಸಮಾಜ ನಿರ್ಮಿಸಬಹುದು. ಎಲ್ಲರೂ ಮೊದಲು ಭಾರತೀಯರು. ಆಮೇಲೆ ಹಿಂದೂ, ಮುಸ್ಲಿಂ, ಕ್ರೈಸ್ತರು ಎನಿಸಿಕೊಳ್ಳುತ್ತೇವೆ. ಎಲ್ಲರೂ ಭಾರತೀಯರಾಗಿ ಭಾರತವನ್ನು ಕಟ್ಟೋಣ. ದ್ವೇಷ ಬಿಟ್ಟು ಪರಸ್ಪರ ಪ್ರೀತಿ ಮಾಡೋಣ ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

ತಮ್ಮ ಧರ್ಮವನ್ನು ಪಾಲಿಸುತ್ತಾ ಪರ ಧರ್ಮವನ್ನು ಗೌರವಿಸಬೇಕು. ಸಹಬಾಳ್ವೆ, ಸೌಹಾರ್ದತೆಯನ್ನು ಪಾಲಿಸಬೇಕು ಎಂದು ನಮ್ಮ ಸಂವಿಧಾನ ತಿಳಿಸುತ್ತದೆ. ಯಾವುದೇ ಧರ್ಮ ದ್ವೇಷವನ್ನು ಪ್ರಚೋದಿಸುವುದಿಲ್ಲ. ದ್ವೇಷರಾಜಕಾರಣ ಮಾಡಬಾರದು. ದ್ವೇಷದಿಂದ ಯಾರ ಮನಸ್ಸನ್ನೂ ಗೆಲ್ಲಲು ಸಾಧ್ಯವಿಲ್ಲ. ಈ ಅರಿವಿಗೆ ಶಿಕ್ಷಣ ಮುಖ್ಯ ಎಂದರು.

ಅಸಮಾನತೆ ಹೋಗಬೇಕೆನ್ನುವ ಕಾರಣದಿಂದ ಗ್ಯಾರಂಟಿಗಳನ್ನು ಜಾರಿಗೆ ತರಲಾಗಿದೆ. ಸಂವಿಧಾನ ಇದನ್ನೇ ಹೇಳುತ್ತದೆ. ಅದನ್ನು ನಮ್ಮ ಸರ್ಕಾರ ಮಾಡುತ್ತಿದೆ. ಸಂವಿಧಾನ ತಿಳಿದವರಿಗೆ ಸಮಾಜಮುಖಿ ಕೆಲಸ ಮಾಡಲು ಸಾಧ್ಯ ಎಂದರು.



ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ಅಲ್ಪಸಂಖ್ಯಾತರ ಘಟಕದ ರಾಜ್ಯಾಧ್ಯಕ್ಷರನ್ನಾಗಿ ಮೆಹಬೂಬ ಮುಲ್ಲಾ ಗಂಗಾವತಿ ಅವರನ್ನು ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಎಂ.ಆಯ್. ಮುಳಗುಂದ ಮತ್ತು ಸಂಚಾಲಕ ರಾಜಶೇಖರ ಕಾತರಗಿ ನೇತೃತ್ವದ ಸಭೆಯಲ್ಲಿ ಆಯ್ಕೆ ಮಾಡಲಾಯಿತು.

## ಜಿಲ್ಲಾ ಮಟ್ಟದ ಜನಸಂಪರ್ಕ ಸಭೆ ಅ.28ಕ್ಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 28ರಂದು ಬೆಳಿಗ್ಗೆ 11 ಗಂಟೆಗೆ ಕಲಘಟಗಿ ಬಮ್ಮಿಗಟ್ಟಿ ಕ್ರಾಸ್ ಹತ್ತಿರದ ಪಟ್ಟಣ ಪಂಚಾಯಿತಿ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತದಿಂದ ಜಿಲ್ಲಾ ಮಟ್ಟದ ಜನಸಂಪರ್ಕ ಸಭೆಯನ್ನು ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯ ಜನ ಸಂಪರ್ಕ ಕಾರ್ಯಕ್ರಮದಲ್ಲಿ ಸಾರ್ವಜನಿಕರು



ತಮ್ಮ ಮನವಿ, ಅಹವಾಲುಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆರೋಗ್ಯ ಶಿಬಿರದಲ್ಲಿ ಪಾರಂಪರಿಕ ವೈದ್ಯ ಹನಮಂತ ಮಳಲಿ ಅಭಿಮತ

# ಸದ್ವಿಚಾರ ಇದ್ದಲ್ಲಿ ರೋಗ ಭಯವಿಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯರಿಗೆ ಅಡುಗೆ ಮನೆಯೇ ಔಷಧಾಲಯ ಇದ್ದಂತೆ. ನಾವು ಪ್ರತಿದಿನ ಸೇವಿಸುವ ಆಹಾರ-ಪದಾರ್ಥಗಳಲ್ಲಿ ಔಷಧೀಯ ಗುಣಗಳಿವೆ. ನಾವು ಅವುಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ನರಗುಂದ ತಾಲೂಕು ವಾಸನ ಗ್ರಾಮದ ಪಾರಂಪರಿಕ ವೈದ್ಯ ಹನಮಂತ ಮಳಲಿ ಹೇಳಿದರು.

ಲಕ್ಷ್ಮೇಶ್ವರ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ ಮತ್ತು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಶನಿವಾರ ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಜಿನ್ನಿಂಗ್ ಫ್ಯಾಕ್ಟರಿಯಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ಶಿಬಿರ ಉದ್ದೇಶಿಸಿ ಅವರು ಮಾತನಾಡಿದರು.

ಆರು ರಸಗಳು ಅಂದರೆ ಸಿಹಿ,



ಉಪ್ಪು, ಹುಳಿ, ಖಾರ, ವಗರು, ಕಹಿ ಸೇವಿಸದೇ ಇರುವುದರಿಂದ ಹಾಗೂ ಅರಿಷಡ್ವರ್ಗಗಳು ಅಂದರೆ ಆರು ವೈರಿಗಳಾದ ಕಾಮ, ಕ್ರೋಧ, ಲೋಭ, ಮದ, ಮತ್ಸರ ಮತ್ತು ಮೋಹಗಳು ಹೆಚ್ಚಾಗುವುದರಿಂದ ಖಂಡಿತವಾಗಿ ನಮ್ಮ ದೇಹಕ್ಕೆ ರೋಗ ಅಂಟಿಕೊಳ್ಳುತ್ತದೆ ಎಂಬುದನ್ನು ಯಾರೂ ಮರೆಯಬಾರದು.

ಒಳ್ಳೆ ವಿಚಾರ ಮಾಡುವವರು ಹಾಗೂ ಯಾವಾಗಲೂ ನಗುತ್ತ ಇರುವವರಿಗೆ ಯಾವುದೇ ರೋಗ ಬರುವುದಿಲ್ಲ ಎಂದು ಹೇಳಿದ ಅವರು, ಈ ಮೊದಲು ಭಾರತೀಯರಿಗೆ ರೋಗ ಎನ್ನುವುದೇ ಗೊತ್ತಿರಲಿಲ್ಲ. ನೈಸರ್ಗಿಕವಾಗಿ ದೊರೆಯುತ್ತಿದ್ದ ವಸ್ತುಗಳನ್ನು ಆಹಾರದಲ್ಲಿ ಬಳಸುತ್ತಿರುವುದೇ ಇದಕ್ಕೆ ಕಾರಣವಾಗಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ನಮ್ಮ ಆಹಾರ-ವಿಹಾರ ಪದ್ಧತಿಗಳು ಬೇರೆ ಆಗಿವೆ. ಹೀಗಾಗಿ ನಾವು ಆಗಾಗ ರೋಗಗಳಿಂದ ಬಳಲಬೇಕಾಗಿದೆ. ಪ್ರಕೃತಿಯಲ್ಲಿ 21 ಲಕ್ಷ ಔಷಧೀಯ ಸಸ್ಯಗಳಿವೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ನಾಗರಿಕರು ಮತ್ತು ನಿವೃತ್ತ

ನಮ್ಮ ಎಲ್ಲ ರೋಗಗಳಿಗೆ ಅಪಚನವೇ ಮುಖ್ಯ ಕಾರಣ. ಆದ್ದರಿಂದ ಹಸಿವು ಇದ್ದಾಗ ಮಾತ್ರ ಊಟ ಮಾಡವುದರ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳುವುದು ನಮ್ಮ ಕೈಯಲ್ಲೇ ಇದೆ. ಪ್ರತಿದಿನ ಯಾವುದೇ ರೂಪದಲ್ಲಾದರೂ ನಾಲ್ಕು ಕಾಳು ಮೆಣಸು, ಅರ್ಧ ಲಿಂಬೆಹಣ್ಣು ಮತ್ತು ತುಳಸಿಯನ್ನು ಸೇವಿಸಿದರೆ ನಾವು ಸದಾ ಆರೋಗ್ಯವಾಗಿ ಇರುತ್ತೇವೆ ಎಂದು ಹನಮಂತ ಮಳಲಿ ಹೇಳಿದರು.

ನೌಕರರ ಸಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಹಿರಿಯ ನಾಗರಿಕ ಅನುಕೂಲಕ್ಕಾಗಿ ಸಂಘದ ವತಿಯಿಂದ ಹತ್ತು ಹಲವು ಉಪಯುಕ್ತ ಕಾರ್ಯಕ್ರಮಕಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ. ಇದರೊಂದಿಗೆ ಹಿರಿಯ ನಾಗರಿಕ ಸಮಸ್ಯೆಗಳ ಪರಿಹಾರಕ್ಕೂ ಸಂಘದ ವತಿಯಿಂದ ಹೋರಾಟ ಮಾಡಲಾಗುವುದು. ಕಾರಣ ಹಿರಿಯರು ಯಾವುದೇ ಕಾರಣಕ್ಕೂ ಚಿಂತೆ ಮಾಡುವ ಅಗತ್ಯ ಇಲ್ಲ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಬರುವ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಚನ್ನಪ್ಪ ಕೋಲಕಾರ, ಐ.ಎಸ್. ಮಡಿವಾಳರ, ಹೇಮಗಿರಿಮಠ, ರೇವಣಸಿದ್ದಯ್ಯ ಬಾಳಿಹಳ್ಳಿಮಠ, ಡಿ.ಬಿ. ಬಳಿಗಾರ, ನೀಲಪ್ಪ ಕರ್ಜೆಕಣ್ಣವರ, ಪ್ರಕಾಶ ಉಪನಾಳ, ಸುರೇಶ ರಾಚನಾಯಕರ, ಎಸ್.ಸಿ. ಅಳಗವಾಡಿ, ಪಾರವ್ವ ಧರಣಿ ಸೇರಿದಂತೆ ಮತ್ತಿತರರು ಇದ್ದರು.

### ಶಿಗ್ಲಿ ಗ್ರಾಮದಲ್ಲಿ ವೀರರಾಣಿ ಚೆನ್ನಮ್ಮಾಜಿಯ ವಿಜಯೋತ್ಸವ, ಜಯಂತ್ಯುತ್ಸವ ಕಾರ್ಯಕ್ರಮ

# ಚೆನ್ನಮ್ಮಳ ದೇಶಪ್ರೇಮ ಯುವ ಪೀಳಿಗೆಗೆ ಆದರ್ಶ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಶಿಗ್ಲಿ

ಸ್ವತಂತ್ರ ಭಾರತದ ಬೆಳ್ಳಿಚುಕ್ಕಿ ಕಿತ್ತೂರ ಚೆನ್ನಮ್ಮ ಕನ್ನಡ ನಾಡಿನ ಸ್ವಾತಂತ್ರ್ಯ ಹಾಗೂ ಸ್ವಾಭಿಮಾನಕ್ಕಾಗಿ ಜೀವನವನ್ನೇ ಸಮರ್ಪಿಸಿಕೊಂಡ ಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿಯಾಗಿದ್ದಾಳೆ ಎಂದು ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ಶಿಗ್ಲಿ ಗ್ರಾಮದಲ್ಲಿ ವೀರರಾಣಿ ಚೆನ್ನಮ್ಮಾಜಿಯ ವಿಜಯೋತ್ಸವ ಮತ್ತು ಜಯಂತ್ಯುತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಬ್ರಿಟೀಷರ ವಿರುದ್ಧ ಸ್ವಾತಂತ್ರ್ಯದ ಕ್ರಾಂತಿ ಕಹಳೆ ಮೊಳಗಿಸಿದ ಸ್ವತಂತ್ರ ಭಾರತದ ಬೆಳ್ಳಿಚುಕ್ಕಿ ವೀರರಾಣಿ ಕಿತ್ತೂರು ಚೆನ್ನಮ್ಮ ಕನ್ನಡ ನಾಡಿನ ಹೆಮ್ಮೆ. ಚೆನ್ನಮ್ಮಳ ದೇಶಪ್ರೇಮ, ಶೌರ್ಯ, ಸಾಹಸ ಇಂದಿನ ಯುವ ಪೀಳಿಗೆಗೆ ಆದರ್ಶವಾಗಬೇಕು. ಈ ನಿಟ್ಟಿನಲ್ಲಿ ಪಾಲಕರು ಮಕ್ಕಳಿಗೆ ಬಾಲ್ಯದಲ್ಲಿಯೇ ಚೆನ್ನಮ್ಮಳಂತಹ ವೀರ ಮಹನೀಯರ ಚರಿತೆಯನ್ನು ಮನದಟ್ಟು ಮಾಡಬೇಕು. ಚೆನ್ನಮ್ಮಳಂತಹ ವೀರ ಮಹಿಳೆಯಿಂದ ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯರಿಗೂ ಸಮಾನ ಸ್ಥಾನಮಾನ, ಗೌರವ ಸಿಗುವಂತಾಗಿದೆ. ಚೆನ್ನಮ್ಮಾಜಿ ಯಾವುದೇ ಒಂದು ಸಮಾಜಕ್ಕೆ ಸೀಮಿತವಾದವರಲ್ಲ, ಕೇವಲ ಜಯಂತಿ, ವಿಜಯೋತ್ಸವಗಳಿಗೆ ಚೆನ್ನಮ್ಮನ ಸ್ಮರಣೆ ಸೀಮಿತವಾಗದೇ ವರ್ಷದುದ್ದಕ್ಕೂ ಇಂತವರ ಸ್ಫೂರ್ತಿದಾಯಕ ಸ್ಮರಣೆಯ ಕಾರ್ಯಕ್ರಮಗಳು ಜರುಗಬೇಕು ಎಂದರು.

ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರೊ. ಸೋಮಶೇಖರ ಕೆರಿಮನಿ ಉಪನ್ಯಾಸ ನೀಡಿ, ಸ್ವಾತಂತ್ರ್ಯ ಸಂಗ್ರಾಮಕ್ಕೆ ಕಿಚ್ಚು ಹಚ್ಚಿದ ಕೀರ್ತಿ ವೀರರಾಣಿ ಕಿತ್ತೂರು ಚೆನ್ನಮ್ಮಳಿಗೆ ಸಲ್ಲುತ್ತದೆ. 1824ರಲ್ಲಿನ ಬ್ರಿಟೀಷರ ವಿರುದ್ಧದ ಹೋರಾಟ 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸ್ಫೂರ್ತಿಯಾಗಿದ್ದು, ಚೆನ್ನಮ್ಮ ಪ್ರಥಮ ಸ್ವಾತಂತ್ರ್ಯ ಹೋರಾಟಗಾರ್ತಿ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪಂಚಮಸಾಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಸೋಮಣ್ಣ ಡಾಣಗಲ್ ಪ್ರಾಸ್ತಾವಿಕ ನುಡಿದರು. ನಿವೃತ್ತ ಲೋಕಾಯುಕ್ತ ಎಸ್‌ಪಿ ಶಂಕರ ಎಂ.ರಾಗಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅತಿಥಿಗಳಾಗಿ ರಾಜ್ಯ ಉಪಾಧ್ಯಕ್ಷ ಎಫ್.ಸಿ. ಮರಿಗೌಡ್ರ, ಜಿಲ್ಲಾಧ್ಯಕ್ಷ ಈರಣ್ಣ ಕರಿಬಿಷ್ಟಿ, ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ, ಆರ್.ಎಂ. ಹೊನಕೇರಿ, ಗ್ರಾ.ಪಂ ಅಧ್ಯಕ್ಷೆ ಸಂಗೀತಾ ಪೂಜಾರ, ಸಿದ್ದಣ್ಣ ಯಲಿಗಾರ, ನಿಂಗಪ್ಪ ಹುನಗುಂದ, ಹೆಚ್.ಎಫ್. ತಳವಾರ, ಹೆಚ್.ಎಫ್. ಗುಡೂರ, ಅಶೋಕ ಶಿರಹಟ್ಟಿ, ಡಿ.ವೈ. ಹುನಗುಂದ, ಬಸಣ್ಣ ಹಂಜಿ, ರಾಮಣ್ಣ ಲಮಾಣಿ ಡಾ. ಬಿ.ವಿ. ಮೇಲ್ಮುರಿ, ಅಜ್ಜಪ್ಪ ಕರ್ಜಕಣ್ಣವರ, ಮುದಕಣ್ಣ ಗಡಾದ, ಚನ್ನಪ್ಪ ಹುನಗುಂದ, ಪ್ರವೀಣ ಕಾಳಪ್ಪನವರ, ಮಂಜುನಾಥ ಇಚ್ಚಂಗಿ ಮುಂತಾದವರಿದ್ದರು.

ಈರಣ್ಣ ಅಕ್ಕೂರ, ಎನ್.ಕೆ. ಹತ್ತಿಕಾಳ, ಬಿ.ಬಿ. ಬಳಿಗಾರ ನಿರ್ವಹಿಸಿದರು. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು.

## ಬಂಧನಕ್ಕೊಳಗಾದ ನಾಲ್ಕು ತಿಂಗಳ ನಂತರ ಅಸ್ಸಾಂ ಮಹಿಳೆ ಬಾಂಗ್ಲಾದಲ್ಲಿ ಪತ್ತೆ

■ವಿಜಯಸಾಕ್ಷಿ ಸುದ್ದಿ, ಅಸ್ಸಾಂ

ಬಿಬಿಸಿ ತಂಡವು ಬಾಂಗ್ಲಾದೇಶದ ಢಾಕಾದ ಮಿರ್ಪುರಾ ಪ್ರದೇಶದಲ್ಲಿ 68 ವರ್ಷದ ಸಕಿನಾ ಬೇಗಂ ಅವರನ್ನು ಪತ್ತೆ ಮಾಡಿದೆ. ಬಂಗಾಳಿ ಅರ್ಥವಾಗದ ಮತ್ತು ಪೂರ್ವ ಅಸ್ಸಾಂನ ನಲ್ಬರಿ ಜಿಲ್ಲೆಯ ಜನರು ಹೆಚ್ಚಾಗಿ ಮಾತನಾಡುವ ಅಸ್ಸಾಮಿ ಭಾಷೆಯ ಉಪಭಾಷೆಯನ್ನು ಮಾತನಾಡುವ ವೃದ್ಧ ಮಹಿಳೆ ಮಿರ್ಪುರ್ ಸ್ಥಳೀಯರಿಗೆ ತನ್ನ ವಿಳಾಸವನ್ನು ಬಹಿರಂಗಪಡಿಸಲು ಹೆಣಗಾಡುತ್ತಿದ್ದಳು, ಅವರು ನಲ್ಬರಿಯ ಸೋನ್‌ಪುರ್ ಗ್ರಾಮದವರು ಎಂದು ದೃಢಪಡಿಸಲಾಯಿತು 'ಮಕ್ತೂಬ್ ಮೀಡಿಯಾ' ವಿಶೇಷ ವರದಿ ಮಾಡಿದೆ.

"ಬಿಬಿಸಿ ತಂಡವು ನಮ್ಮ ಮನೆಗೆ ಭೇಟಿ ನೀಡಿದ ನಂತರವೇ ಅವರು ಇರುವ ಸ್ಥಳದ ಬಗ್ಗೆ ನಮಗೆ ತಿಳಿದಿತ್ತು, ವೀಡಿಯೊ ಕರೆಯಲ್ಲಿ ನಾವು ಅವರೊಂದಿಗೆ ಮಾತನಾಡುವಂತೆ ಮಾಡಿದ್ದೇವೆ" ಎಂದು ಅವರ ಮಗಳು ರಸಿಯಾ ಬೇಗಂ ತಿಳಿಸಿದ್ದಾರೆ ಎಂದು



ಮಕ್ತೂಬ್ ಮೀಡಿಯಾ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.

ನಾಲ್ಕು ತಿಂಗಳ ಹಿಂದೆ, ಮೇ ತಿಂಗಳಲ್ಲಿ, ನಲ್ಬರಿ ಪೊಲೀಸರು ಬೇಗಂ ಅವರನ್ನು "ಪ್ರಕರಣಕ್ಕೆ ಸಂಬಂಧಿಸಿದ ಕೆಲವು ದಾಖಲೆಗಳ ಮೇಲೆ ಸಹಿಗಾಗಿ" ಪೊಲೀಸ್ ಠಾಣೆಗೆ ಹಾಜರಾಗುವಂತೆ ಕೇಳಿದ ನಂತರ ಅವರು ಕಾಣೆಯಾಗಿದ್ದರು ಎಂದು 45 ವರ್ಷದ ರಸಿಯಾ ಬೇಗಂ ಹೇಳಿದರು.

ಅದೇ ತಿಂಗಳಲ್ಲಿ, ರಾಜ್ಯದ ಬಲಪಂಥೀಯ ಭಾರತೀಯ ಜನತಾ ಪಕ್ಷದ ಸರ್ಕಾರವು ಘೋಷಿತ ವಿದೇಶಿ ಪ್ರಜೆಗಳ ಮೇಲೆ ರಾಜ್ಯಾದ್ಯಂತ ಕಠಿಣ ಕ್ರಮ ಕೈಗೊಂಡಿತು. ಒಂದು ವಾರದ ಅವಧಿಯ ಲಾಕ್‌ಡೌನ್ ಕಾರ್ಯಾಚರಣೆಯಲ್ಲಿ ಬೇಗಂ ಅವರಂತಹ ನೂರಾರು ಜನರನ್ನು ಬಂಧಿಸಿತು.

ಘೋಷಿತ ವಿದೇಶಿ ಪ್ರಜೆಗಳು ರಾಜ್ಯದ ವಿದೇಶಿಯರ ನ್ಯಾಯಮಂಡಳಿಗಳಿಂದ ನಾಗರಿಕರಲ್ಲದವರೆಂದು ಘೋಷಿಸಲ್ಪಟ್ಟ ವ್ಯಕ್ತಿಗಳು, ವ್ಯಕ್ತಿಯ ಪೌರತ್ವದ ಮೇಲೆ ತೀರ್ಪು ನೀಡುವ ಅರೆ-ನ್ಯಾಯಾಂಗ ಸಂಸ್ಥೆಗಳು, ಜನರನ್ನು ನಿರಂಕುಶವಾಗಿ ಮತ್ತು ಪಕ್ಷಪಾತದಿಂದ ವಿದೇಶಿಯರೆಂದು ಘೋಷಿಸಿದ್ದಕ್ಕಾಗಿ ಹೆಚ್ಚಾಗಿ ಟೀಕಿಸಲ್ಪಡುತ್ತವೆ.

ಬಂಧನಕ್ಕೊಳಗಾದವರಲ್ಲಿ ಅನಿರ್ದಿಷ್ಟ ಸಂಖ್ಯೆಯ ಜನರನ್ನು ಬಿಡುಗಡೆ ಮಾಡಲಾಗಿದ್ದರೂ, ನೂರಾರು ಜನರನ್ನು ಅಸ್ಸಾಂನ ಗೋಲ್‌ಪಾರಾದ ಭಾರತದ ಅತಿದೊಡ್ಡ ಬಂಧನ ಕೇಂದ್ರವಾದ ಮಾಟಿಯಾದ ಟ್ರಾನ್ಸಿಟ್ ಕ್ಯಾಂಪ್‌ಗೆ ಕರೆದೊಯ್ಯಲಾಯಿತು.

## ಶ್ರೀಗಳ ಮೇಲಿನ ನಿಷೇಧ ಹಿಂಪಡೆಯಲು ಮನವಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕನ್ನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಯವರಿಗೆ ಕೆಲವು ಜಿಲ್ಲೆಗಳಲ್ಲಿ ಹೇರಿರುವ ನಿಷೇಧವನ್ನು ಹಿಂಪಡೆಯುವಂತೆ ಆಗ್ರಹಿಸಿ ಶಿರಹಟ್ಟಿ ತಾಲೂಕಾ ಹಿಂದೂಪರ ಸಂಘಟನೆಗಳ ಒಕ್ಕೂಟದ ವತಿಯಿಂದ ತಹಸೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ಸಂತೋಷ ಕುರಿ, ನಾಡಿನ ಹಿರಿಮೆಗೆ ಗುರುವಿನ ಮಹಿಮೆ ಅಪಾರವಾದದ್ದು. ಶ್ರೇಷ್ಠ ಸಂತ ಕಾಡಸಿದ್ದೇಶ್ವರ ಸ್ವಾಮೀಜಿಗಳು ಗೋಶಾಲೆ, ಅನಾಥಾಶ್ರಮಗಳು, ವಯೋವೃದ್ಧರಿಗೆ ಮಾಶಾಸನ, ಅನಾಥ ಮಕ್ಕಳಿಗೆ ಊಟ, ವಸತಿ, ಶಿಕ್ಷಣ, ಗುರುಕುಲ ಹಾಗೂ ಸಾವಯವ ಕೃಷಿಯ ಮೂಲಕ ದೇಶದ ಕೃಷಿಕ ಸಂಪತ್ತನ್ನು ಶ್ರೀಮಂತಗೊಳಿಸಿದ್ದಾರೆ. ಶ್ರೀಗಳಿಗೆ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಪ್ರವೇಶ ನಿರ್ಬಂಧಿಸಿರುವುದು ಸೂಕ್ತವಲ್ಲ. ಈ ಕೂಡಲೇ ಸದರಿ ಕಾನೂನು ಬಾಹಿರ ನಿರ್ಬಂಧವನ್ನು ತೆಗೆದುಹಾಕಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪರಶುರಾಮ ಡೊಂಕಬಳ್ಳಿ, ವೀರಣ್ಣ ಅಂಗಡಿ, ಶಶಿಕುಮಾರ ಪೂಜಾರ, ಅರುಣಕುಮಾರ ತಿರ್ಲಾಪೂರ, ಬಸವರಾಜ ಕಲ್ಯಾಣಿ, ಪ್ರಕಾಶ ಶೇಳಕೆ, ಆನಂದ ಸ್ವಾಮಿ, ರವಿ ಜಾಧವ, ದೇವಪ್ಪ ಪೂಜಾರ, ಸಂತೋಷ ತೋಡೆಕರ ಮುಂತಾದವರು ಉಪಸ್ಥಿತರಿದ್ದರು.

## ಸತಾರ ವೈದ್ಯೆ ಆತ್ಮಹತ್ಯೆ ಪ್ರಕರಣ: ಟೆಕ್ಕಿ ಬಂಧನ; ಅತ್ಯಾಚಾರ ಆರೋಪಿ ಪೊಲೀಸ್ ಅಧಿಕಾರಿಗಾಗಿ ಹುಡುಕಾಟ

■ವಿಜಯಸಾಕ್ಷಿ ಸುದ್ದಿ, ಮುಂಬೈ

ಸತಾರ ಸರ್ಕಾರಿ ಆಸ್ಪತ್ರೆ ವೈದ್ಯೆಯ ಆತ್ಮಹತ್ಯೆ ಪ್ರಕರಣದಲ್ಲಿ ಪ್ರಮುಖ ಪ್ರಗತಿಯಲ್ಲಿ, ಮಹಿಳಾ ವೈದ್ಯೆಯ ಮೇಲೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಕಿರುಕುಳ ನೀಡಿದ ಆರೋಪ ಹೊತ್ತಿರುವ ಸಾಫ್ಟ್‌ವೇರ್ ಎಂಜಿನಿಯರ್ ಪ್ರಶಾಂತ್ ಬಂಕರ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.


ವೈದ್ಯೆಯ ಮೇಲೆ ಹಲವು ಬಾರಿ ಅತ್ಯಾಚಾರ ಮತ್ತು ಕಿರುಕುಳ ನೀಡಿದ ಆರೋಪ ಹೊತ್ತಿರುವ ಸಬ್ ಇನ್ಸ್‌ಪೆಕ್ಟರ್ ಗೋಪಾಲ್ ಬದನೆ ತಲೆಮರೆಸಿಕೊಂಡಿದ್ದಾನೆ. ಪರಾರಿಯಾಗಿರುವ ಈ ವ್ಯಕ್ತಿಯನ್ನು ಬಂಧಿಸಲು ಸತಾರ ಪೊಲೀಸರು ನಾಲ್ಕು ತಂಡಗಳನ್ನು ರಚಿಸಿದ್ದಾರೆ.

ಮಹಾರಾಷ್ಟ್ರದ ಸತಾರದ ಸರ್ಕಾರಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳಾ ವೈದ್ಯೆ ತನ್ನ ಅಂಗೈಯಲ್ಲಿ ಆತ್ಮಹತ್ಯೆ ಪತ್ರ ಬರೆದು ತನ್ನ ಜೀವನವನ್ನು ಕೊನೆಗೊಳಿಸಿಕೊಂಡಿದ್ದಾರೆ. ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮತ್ತು ಟೆಕ್ಕಿ ಕಳೆದ ಐದು ತಿಂಗಳುಗಳಲ್ಲಿ ಅತ್ಯಾಚಾರ-ಮಾನಸಿಕ ಕಿರುಕುಳ ನೀಡಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

"ಬದನೆ ನನ್ನ ಮೇಲೆ ನಾಲ್ಕು ಬಾರಿ ಅತ್ಯಾಚಾರ ಮಾಡಿದ್ದಾರೆ. ಅವರು ಐದು ತಿಂಗಳಿಗೂ ಹೆಚ್ಚು ಕಾಲ ನನ್ನನ್ನು ಅತ್ಯಾಚಾರ, ಮಾನಸಿಕ ಮತ್ತು ದೈಹಿಕ ಕಿರುಕುಳಕ್ಕೆ ಒಳಪಡಿಸಿದ್ದಾರೆ" ಎಂದು ಟಿಪ್ಪಣಿಯಲ್ಲಿ ಬರೆಯಲಾಗಿದೆ.

ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಸತಾರ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ತುಷಾರ್ ದೋಷಿ ಅವರೊಂದಿಗೆ ಮಾತನಾಡಿ, ಆತ್ಮಹತ್ಯೆ ಪತ್ರದಲ್ಲಿ ಹೆಸರಿಸಲಾದ ಸಬ್ ಇನ್ಸ್‌ಪೆಕ್ಟರ್ ಅವರನ್ನು ಅಮಾನತುಗೊಳಿಸಲು ಆದೇಶಿಸಿದ್ದಾರೆ.

## ಕರ್ನೂಲ್ ಬಸ್ ದುರಂತ: ಚಾಲಕನ ನಿರ್ಲಕ್ಷ್ಯಕ್ಕೆ ಬಲಿಯಾದ 20 ಜನ



■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಶುಕ್ರವಾರ ಬೆಳಗಿನ ಜಾವ ಬೆಂಗಳೂರಿಗೆ ಹೋಗುತ್ತಿದ್ದ ಖಾಸಗಿ ಬಸ್ ಬೆಂಕಿಗೆ ಆಹುತಿಯಾಗಿ 20 ಜನರು ಸಾವನ್ನಪ್ಪಿದ ಭೀಕರ ರಸ್ತೆ ಅಪಘಾತಕ್ಕೆ ಚಾಲಕನೇ ನಿರ್ಲಕ್ಷ್ಯವೇ ಕಾರಣ ಎಂದು ಮೇಲ್ನೋಟಕ್ಕೆ ಕಂಡುಬಂದಿದೆ.

ಶುಕ್ರವಾರ ಬೆಳಗಿನ ಜಾವ 3 ಗಂಟೆ ಸುಮಾರಿಗೆ ವಿ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ 44 ಪ್ರಯಾಣಿಕರಿದ್ದ ಬಸ್, ತೆಲಂಗಾಣದ ಹೈದರಾಬಾದ್‌ನಿಂದ ಕರ್ನಾಟಕದ ಬೆಂಗಳೂರಿಗೆ ಹೋಗುತ್ತಿದ್ದಾಗ ಕರ್ನೂಲ್ ನಗರದ ಹೊರವಲಯದ ಬಳಿ ರಾಷ್ಟ್ರೀಯ ಹೆದ್ದಾರಿ (ಎನ್‌ಎಚ್) 44 ರಲ್ಲಿ ಮೋಟಾರ್‌ಸೈಕಲ್‌ಗೆ ಡಿಕ್ಕಿ ಹೊಡೆದು ಈ ಘಟನೆ ಸಂಭವಿಸಿದೆ. ಮಲ್ಟಿ ಆಕ್ಸಲ್ ಸ್ಲೀಪರ್ ಎಸಿ ವೋಲ್ವೋ ಬಸ್ 42 ಆಸನ ಸಾಮರ್ಥ್ಯವನ್ನು ಹೊಂದಿತ್ತು ಎಂದು ವರದಿಯಾಗಿದೆ.

ಇತ್ತೀಚಿನ ಬೆಳವಣಿಗೆಯಲ್ಲಿ, ಚಾಲಕನ ವಿರುದ್ಧ ಪೊಲೀಸರು ನಿರ್ಲಕ್ಷ್ಯದ ಪ್ರಕರಣ ದಾಖಲಿಸಿದ್ದಾರೆ. ಬಸ್‌ನ ಇಬ್ಬರು ಚಾಲಕರ ವಿರುದ್ಧ ಅತಿವೇಗದ ಪ್ರಕರಣ ದಾಖಲಿಸಲಾಗಿದೆ, ಅವರಲ್ಲಿ ಒಬ್ಬರು ತಮ್ಮ ಹೇಳಿಕೆ ಬದಲಾಯಿಸಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತದ ಪ್ರಮುಖ ಅಂಶಗಳು ಪೊಲೀಸರು ಮತ್ತು ಬದುಕುಳಿದ ಪ್ರಯಾಣಿಕರ ಪ್ರಕಾರ, ಖಾಸಗಿ ಬಸ್ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದ ನಂತರ ಬೆಂಕಿ ಕಾಣಿಸಿಕೊಂಡಿತು. "ದ್ವಿಚಕ್ರ ವಾಹನವು ಬಸ್ಸಿನ ಕೆಳಗೆ ಸಿಲುಕಿಕೊಂಡು ಇಂಧನ ಟ್ಯಾಂಕ್‌ಗೆ ಡಿಕ್ಕಿ ಹೊಡೆದ ಪರಿಣಾಮವಾಗಿ ತಕ್ಷಣ ಸ್ಫೋಟಗೊಂಡು ವಾಹನದಾದ್ಯಂತ ಬೆಂಕಿ ವೇಗವಾಗಿ ಹರಡಿತು" ಎಂದು ಪೊಲೀಸರು ಹೇಳಿದ್ದಾರೆ.

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಕಲ್ಲೂರ್ ಮಂಡಲದ ಚಿನ್ನೇಕೂರ್ ಗ್ರಾಮದ ಬಳಿ ಸಂಭವಿಸಿದ ಬಸ್ ಬೆಂಕಿಯಲ್ಲಿ ಬೈಕ್ ಸವಾರ ಸೇರಿದಂತೆ 20 ಜನರು ಸಾವನ್ನಪ್ಪಿದ್ದಾರೆ. ಪೊಲೀಸರ ಪ್ರಕಾರ, ಘಟನೆಯ ನಡುವೆ ಇನ್ನೂ 12 ಪ್ರಯಾಣಿಕರು ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ.

## 'ದಯವಿಟ್ಟು ನನಗೆ ಸಹಾಯ ಮಾಡಿ, ಇಲ್ಲಿ ನಾನು ಸಾಯುತ್ತೇನೆ..'; ಸೌದಿಯಿಂದ ಉತ್ತರ ಪ್ರದೇಶದ ವ್ಯಕ್ತಿಯ ಭಾವನಾತ್ಮಕ ಸಂದೇಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಚ್ಛೆಗೆ ವಿರುದ್ಧವಾಗಿ ತನ್ನನ್ನು ಇಲ್ಲಿ ಬಂಧಿಸಿಡಲಾಗಿದೆ ಎಂದು ಉತ್ತರ ಪ್ರದೇಶದ ವ್ಯಕ್ತಿಯೊಬ್ಬ ಹೇಳಿಕೊಂಡಿರುವ ಹೃದಯ ವಿದ್ರಾವಕ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಭಾರತೀಯ ರಾಯಭಾರ ಕಚೇರಿಯು ಗಮನಿಸಿ ಅವರಿಗಾಗಿ ಹುಡುಕಾಟ ಆರಂಭಿಸಿದೆ.

ಉದ್ಯೋಗದಾತರು ವಿದೇಶಿ ಕಾರ್ಮಿಕರ ವೀಸಾಗಳನ್ನು ನಿಯಂತ್ರಿಸುತ್ತಿದ್ದ ದಶಕಗಳಷ್ಟು ಹಳೆಯದಾದ 'ಕಫಲಾ' ವ್ಯವಸ್ಥೆಯನ್ನು ರದ್ದುಗೊಳಿಸಲು ಸೌದಿ ಅರೇಬಿಯಾ ನಿರ್ಧರಿಸಿರುವ ಸಮಯದಲ್ಲಿ ಈ ವೀಡಿಯೊ ಹೊರಹೊಮ್ಮಿದೆ. ದೆಹಲಿ ಮೂಲದ ವಕೀಲರೊಬ್ಬರು ಹಂಚಿಕೊಂಡ ವೀಡಿಯೊದಲ್ಲಿ, ಭೋಜ್‌ಪುರಿಯಲ್ಲಿ ಮಾತನಾಡುತ್ತಿರುವ ವ್ಯಕ್ತಿ, ತನ್ನ ಪಾಸ್‌ಪೋರ್ಟ್ ಅನ್ನು ಬಹುಶಃ ತನ್ನ ಉದ್ಯೋಗದಾತ ಕಪಿಲ್ ತಡೆಹಿಡಿದಿದ್ದಾರೆ ಎಂದು ಹೇಳಿಕೊಂಡಿದ್ದಾನೆ. ಸಹಾಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಮನವಿ ಮಾಡುತ್ತಾನೆ.

"ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ದಯವಿಟ್ಟು ತಕ್ಷಣ ಗಮನ ಹರಿಸಿ. ಪ್ರಯಾಗರಾಜ್‌ನ ಪ್ರತಾಪಪುರದ ಹಂಡಿಯಾ ನಿವಾಸಿಯೊಬ್ಬರು ಸೌದಿ ಅರೇಬಿಯಾದಲ್ಲಿ ಸಿಲುಕಿಕೊಂಡಿದ್ದಾರೆ" ಎಂದು ವಕೀಲರು ವೀಡಿಯೊದೊಂದಿಗೆ ಟ್ವೀಟ್ ಮಾಡಿದ್ದಾರೆ.

ವೀಡಿಯೊದಲ್ಲಿ, ಆ ವ್ಯಕ್ತಿ ದುಃಖಿತನಾಗಿ ಮತ್ತು ದಣಿದ ಸ್ಥಿತಿಯಲ್ಲಿ ಕಾಣಿಸಿಕೊಳ್ಳುತ್ತಿದ್ದಾನೆ. ಆ ವ್ಯಕ್ತಿ ವೀಡಿಯೊವನ್ನು ರೆಕಾರ್ಡ್ ಮಾಡುವಾಗ ಹಿನ್ನೆಲೆಯಲ್ಲಿ ಒಂಟೆಯೊಂದು ಗೋಚರಿಸುತ್ತದೆ.

"ನನ್ನ ಹಳ್ಳಿ ಅಲಹಾಬಾದ್‌ನಲ್ಲಿದೆ ನಾನು ಸೌದಿ ಅರೇಬಿಯಾಕ್ಕೆ ಬಂದಿದ್ದೇನೆ. ಕಪಿಲ್‌ಗೆ ನನ್ನ ಪಾಸ್‌ಪೋರ್ಟ್ ಇದೆ. ನಾನು ಮನೆಗೆ ಹೋಗಬೇಕು ಎಂದು ನಾನು ಅವನಿಗೆ ಹೇಳಿದೆ, ಆದರೆ ಅವನು ನನ್ನನ್ನು ಕೊಲ್ಲುವುದಾಗಿ ಬೆದರಿಕೆ ಹಾಕುತ್ತಿದ್ದಾನೆ" ಎಂದು ಆ ವ್ಯಕ್ತಿ ತನ್ನ ಧ್ವನಿಯಲ್ಲಿ ನಡುಗುತ್ತಾ ಹೇಳುತ್ತಾನೆ.

# ಸಾಕ್ಷ್ಯಚಿತ್ರ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆಶೀರ್ವಾದದೊಂದಿಗೆ ಧಾರವಾಡದ ಪುರಂದರ ಮಂಟಪದ ಶ್ರೀ ರಾಘವೇಂದ್ರ ಮಠದ ಕುರಿತು ವಿದ್ಯಾ ವಿನಾಯಕ ಟ್ರಸ್ಟ್ ನಿರ್ಮಾಣದ ಶ್ರೀ ಸಿದ್ಧಿವಿನಾಯಕ ಕಂಬೈನ್ಸ್‌ರವರ ಪುರಂದರ ಮಂಟಪ ಶ್ರೀ ರಾಘವೇಂದ್ರಮಠ ಸಾಕ್ಷ್ಯಚಿತ್ರ ಬಿಡುಗಡೆ ಮಾಡಲಾಯಿತು.

ಧಾರವಾಡದ ಯಾಲಕ್ಕಿ ಶೆಟ್ಟರ ಕಾಲನಿಯ ಪುರಂದರ ಮಂಟಪದಲ್ಲಿ ಮಠದ ಧರ್ಮದರ್ಶಿ, ಮೇಲ್ವಿಚಾರಕರಾದ ಸಿ. ನಾಗರಾಜ



ಬಿಡುಗಡೆ ಮಾಡಿದರು. ಪಂಡಿತ ಜಿ.ವಿ ನವಲಗುಂದ, ಮಠಾಧಿಕಾರಿಗಳಾದ ಪಂಡಿತ ಬಂಡಾಚಾರ್ಯ ಗಿಡದ ಹುಬ್ಬಳ್ಳಿ, ಡಾ. ಪ್ರಲ್ಹಾದ ಛಬ್ಬಿ, ಎನ್.ಡಿ. ಕುಲಕರ್ಣಿ, ಜೋಶಿ, ವಿಜಯ ವಿಠಲಾಚಾರ್ಯ, ಬಸವರಾಜ ಹೂಗಾರ, ಅರವಿಂದ ನಾಗಜ್ಜನವರ, ಮುಜುಮದಾರ, ಸಿ.ವೇದವತಿ, ರತ್ನ ಜೋಶಿ, ಪದ್ಮ ನವಲಗುಂದ, ಹರಿಪ್ರಿಯ, ಶ್ರೀನಿವಾಸ, ಗುರುರಾಜ ದಂಪತಿಗಳು, ರಮೇಶ್, ಸಚಿನ್ ಭಜನಾ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

ಈ ಸಾಕ್ಷ್ಯಚಿತ್ರಕ್ಕೆ ಸಾಹಿತ್ಯ ಶ್ರೀ ಜೋಶಿ, ಛಾಯಾಗ್ರಹಣ ವಿನಾಯಕ ಬಸವಾ, ಸಂಗೀತ ರಜತ ಬಸವಾ, ಸ್ತುತಿ ಆಶಾ ಆಚಾರ್ಯ, ಸಂಕಲನ ಸಿದ್ಧಾರ್ಥ್ ಜಾಲಿಹಾಳ, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಡಿಜೈನ್ ನಟರಾಜ ಪತ್ತಾರ, ಸಹಕಾರ ಡಾ. ಕಲ್ಮೇಶ್ ಹಾವೇರಿಪೇಟ್, ಕಿಶನರಾವ್ ಎಂ.ಕುಲಕರ್ಣಿ, ಎನ್.ಎಸ್. ಪಾಟೀಲ, ಪ್ರಮೋದ್ ಜೋಶಿ, ಲತಾ ಎಂ. ಜೋಶಿ, ಕೀರ್ತಿ ಅರವಿಂದ, ನಿರ್ವಹಣೆ ಆನಂದ ಜೋಶಿ, ರಘು ತುಮಕೂರು ಅವರದಿದ್ದು, ಕಿರುಚಿತ್ರ, ಚಲನಚಿತ್ರಗಳ ನಿರ್ದೇಶಕ ಅರವಿಂದ ಮುಳಗುಂದ ನಿರ್ದೇಶನ ಮಾಡಿದ್ದಾರೆ.

# ಪ್ರಯಾಣಿಕರ ಸುರಕ್ಷತೆಗೆ ಆದ್ಯತೆ ನೀಡಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಇತ್ತೀಚೆಗೆ ಖಾಸಗಿ ಹಾಗೂ ಸರಕಾರಿ ಬಸ್‌ಗಳ ಅನಾಹುತಗಳಿಂದ ಜನರು ತಮ್ಮ ಪ್ರಾಣ ಕಳೆದುಕೊಳ್ಳುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಇತ್ತೀಚೆಗೆ ನಡೆದ ಹಲವು ಘಟನೆಗಳಲ್ಲಿ ಸಾರಿಗೆ ಸಂಸ್ಥೆಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಇಂತಹ ಅಪಘಾತಗಳಿಗೆ ಕಾರಣ ತಿಳಿಯಲು ಸೂಕ್ತ ತನಿಖೆ ನಡೆಸಬೇಕಿದೆ. ಇಂತಹ ದುರ್ಘಟನೆಗಳು ಮತ್ತೆ ಸಂಭವಿಸದಂತೆ ಎಚ್ಚರ ವಹಿಸಬೇಕಾಗಿದೆ ಎಂದು ವೆಲ್‌ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯಾಧ್ಯಕ್ಷ ತಾಹಿರ್ ಹುಸೇನ್ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ಬರೆದಿದ್ದಾರೆ.

ರಾಜ್ಯದ ಎಲ್ಲ ಖಾಸಗಿ ಬಸ್ಸುಗಳ ತಪಾಸಣೆ ನಡೆಸಿ ಗುಣಮಟ್ಟದ ಬಗ್ಗೆ ಕಾಳಜಿ ವಹಿಸಬೇಕು. ಜನರ ಸುರಕ್ಷತೆಯ ದೃಷ್ಟಿಯಿಂದ, ಖಾಸಗಿ ಬಸ್‌ಗಳ ನಿಯಂತ್ರಣವನ್ನು ಸರ್ಕಾರದ ಅಡಿಯಲ್ಲಿ ತರಬೇಕು. ಪರವಾನಗಿ ಮುಗಿದ, ಬಸ್ಸುಗಳು ಸಂಚರಿಸದಂತೆ ಕಠಿಣ ಕ್ರಮ ವಹಿಸಬೇಕು.

ಸರಕಾರಿ ಹಾಗೂ ಖಾಸಗಿ ಹವಾನಿಯಂತ್ರಿತ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ಬಗ್ಗೆ ವಿಶೇಷ ಕಾರ್ಯತಂತ್ರ ರೂಪಿಸಬೇಕು. ರಾತ್ರಿ ಸಂಚರಿಸುವ ಬಸ್ಸುಗಳ ಚಾಲಕರು ಕುಡಿದು ವಾಹನ ಓಡಿಸುವುದನ್ನು ತಡೆಗಟ್ಟಲು ವಿಶೇಷ ತಪಾಸಣೆ ನಡೆಸಬೇಕು ಎಂದು ಅವರು ಪತ್ರದಲ್ಲಿ ಒತ್ತಾಯಿಸಿದ್ದಾರೆ.

### ರಾಗಿಮಸಲವಾಡ ಗ್ರಾ.ಪಂ ವ್ಯಾಪ್ತಿಯಲ್ಲಿ ಮಹಿಳೆ ಶಂಕಾಸ್ಪದ ಸಾವು

# ಸ್ವಚ್ಛತೆಯ ಕೊರತೆಯೇ ಮುಳುವಾಯಿತೇ?!



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ರಾಗಿಮಸಲವಾಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಟಿ.ತುಂಬಿಗೆರೆ ಗ್ರಾಮದ ಎಸ್.ಟಿ. ಸೌಭಾಗ್ಯಮ್ಮ (35) ಡೆಂಗ್ಯೂ ಜ್ವರದಿಂದ ಶುಕ್ರವಾರ ತಡರಾತ್ರಿ ಸಾವನ್ನಪ್ಪಿರುವುದಾಗಿ ಕುಟುಂಬಸ್ಥರು ತಿಳಿಸಿದ್ದಾರೆ. ಮೃತ ಮಹಿಳೆ ಕಳೆದೆರಡು ದಿನಗಳಿಂದ ಉಸಿರಾಟದ ತೊಂದರೆ ಹಾಗೂ ವೈರಸ್ ಸೋಂಕಿನ ಜ್ವರದಿಂದ ಬಳಲುತ್ತಿದ್ದರಿಂದ ದಾವಣಗೆರೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

ದಲಿತ ಕಾಲೋನಿಯ ಸೌಭಾಗ್ಯಮ್ಮ ಅವರ ಮನೆಯ ಮುಂದಿನ ರಸ್ತೆಯನ್ನು ಕಳೆದ 15 ವರ್ಷಗಳ ಹಿಂದೆ ನಿರ್ಮಾಣ ಮಾಡಲಾಗಿತ್ತು. ನಂತರದ ದಿನಗಳಲ್ಲಿ ರಸ್ತೆ ಸಂಪೂರ್ಣ ಹಾಳಾಗಿ ದಲಿತ ಕಾಲೋನಿಯ ಮನೆಯ ಮುಂದುಗಡೆಯೇ ಕಲುಷಿತ ನೀರು ಶೇಖರಣೆಯಾಗುತ್ತಿತ್ತು. ನಿರಂತರವಾಗಿ ಸುರಿದ ಮಳೆಯಿಂದ ಸೊಳ್ಳೆಗಳ ಉತ್ಪತ್ತಿಯಾಗಿ ಡೆಂಗ್ಯೂ ಜ್ವರ ಹರಡತೊಡಗಿತ್ತು. ಕಳೆದ 15 ದಿನಗಳ ಹಿಂದೆಯಷ್ಟೇ ಡೆಂಗ್ಯೂವಿನಿಂದ ಓರ್ವ ವ್ಯಕ್ತಿ ಈ ಕಾಲೋನಿಯಲ್ಲಿ ಸಾವನ್ನಪ್ಪಿದ್ದರು. ರಸ್ತೆ ದುರಸ್ತಿ ಮಾಡಿಸಲು ಶಾಸಕರಿಗೆ ಮತ್ತು ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ನಮ್ಮ ಮನೆಯ ಮುಂದುಗಡೆಯೇ ಮಳೆಯ ನೀರು ಶೇಖರಣೆಯಾಗಿ, ದಿನ ನಿತ್ಯ ಅದರ ವಾಸನೆ ಸೇವಿಸುತ್ತಾ ನಾವು ಊಟ ಮಾಡಬೇಕಾದ ಅನಿವಾರ್ಯತೆ ಇದೆ. ಮಳೆಗಾಲ ಬಂತೆಂದರೆ ಸೊಳ್ಳೆಗಳ ಉಪಟಳ ಹೇಳತೀರದಾಗಿದೆ ಎಂದು ಕಾಲೋನಿಯ ನಿವಾಸಿ ಕೃಷ್ಣ ಅಳಲು ತೋಡಿಕೊಂಡರು.

ಭೋವಿ ಕಾಲೋನಿಯ ಮನೆಯ ಸುತ್ತ ಕಲುಷಿತ ವಾತಾವರಣವಿದೆ. ಅತಿಯಾದ ಮಳೆಯಿಂದ ಸೊಳ್ಳೆಗಳ ಉತ್ಪತ್ತಿಯಾಗಿ ಡೆಂಗ್ಯೂ ಜ್ವರ ಬಾಧಿಸಿರುವ ಸಾಧ್ಯತೆಯಿದೆ. ಕೆ ಶೀಟ್ ವರದಿಗಾಗಿ ಅರ್ಜಿ ಸಲ್ಲಿಸಿದ್ದೇವೆ, ಎರಡು ದಿನಗಳ ನಂತರ ಖಚಿತ ಮಾಹಿತಿ ಲಭ್ಯವಾಗಲಿದೆ ಎಂದು ಟಿಹೆಚ್‌ಓ ಡಾ. ಪೃಥ್ವಿ ತಿಳಿಸಿದರು.

> ನಮ್ಮ ಭೋವಿ ಕಾಲೋನಿ ಹೊರತುಪಡಿಸಿ, ಗ್ರಾಮದ ಉಳಿದೆಲ್ಲ ರಸ್ತೆಗಳು ಸ್ವಚ್ಛವಾಗಿವೆ. ರಸ್ತೆ ದುರಸ್ತಿ ಮತ್ತು ಚರಂಡಿ ನಿರ್ಮಾಣವಿಲ್ಲದ ಕಾರಣ ನಿತ್ಯ ಬಳಕೆಯ ನೀರನ್ನು ನಮ್ಮ ಕಾಲೋನಿ ಜನರು ಮನೆಯಂಗಳದಲ್ಲಿಯೇ ಚೆಲ್ಲಬೇಕಾಗಿದೆ. ಮಳೆಗಾಲದಲ್ಲಿ ನೀರು ಕಾಲೋನಿಯ ತುಂಬ ಒಂದೇ ಕಡೆ ಶೇಖರಣೆಯಾಗುತ್ತದೆ. ಹಾಗಾಗಿ ಸೊಳ್ಳೆಗಳು ಉತ್ಪತ್ತಿಯಾಗಿ ನಾವು ಪ್ರತಿ ವರ್ಷ ಸಾಂಕ್ರಾಮಿಕ ರೋಗದಿಂದ ಪರಿತಪಿಸಿ, ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ತೆರಳುವುದು ಅನಿವಾರ್ಯವಾಗಿದೆ. ಶಾಸಕರಿಗೆ ರಸ್ತೆ ನಿರ್ಮಿಸಲು ಹಲವು ಬಾರಿ ಮನವಿ ನೀಡಿದ್ದೇವೆ. ಆದರೆ ಯಾವುದೇ ಪ್ರಯೋಜನವಾಗಿಲ್ಲವೆಂದು ಕಾಲೋನಿಯ ನಿವಾಸಿ ಭೋವಿ ಮಂಜುನಾಥ ತಿಳಿಸಿದರು.



# ಯುವಜನೋತ್ಸವ ಭವಿಷ್ಯದ ಮೈಲಿಗಲ್ಲಾಗಲಿ

▶▶ಮೊದಲನೇ ಪುಟದಿಂದ




ಭಾಗಗಳಿಂದ ಆಗಮಿಸಿದ ಸ್ಪರ್ಧಾಳುಗಳು ತಮ್ಮ ತಮ್ಮ ವಿಭಾಗಗಳಲ್ಲಿ ಯಶಸ್ಸನ್ನು ಪಡೆಯಲಿ ಎಂದು ಹಾರೈಸಿದರು.

ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಲಯನ್ಸ್ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಾ. ಜೆ.ಸಿ. ಶಿರೋಳ, ಸಿದ್ದು ಪಾಟೀಲ, ಸಾವಿತ್ರಿ ಲಮಾಣಿ, ಶಂಕ್ರಣ್ಣ ಸಂಕಣ್ಣನವರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಗಣ್ಯರಾದ ರಾಜೇಶ ಕುಲಕರ್ಣಿ, ಎಮ್.ಸಿ. ಹಿರೇಮಠ, ಪ್ರೇಮಾನಂದ ರೋಣದ, ಸಯ್ಯದ ಮತೀನ್ ಮುಲ್ಲಾ, ರೋಹಿತ ಒಡೆಯರ, ರಾಹುಲ್ ಒಡೆಯರ, ಪುನೀತ ದೇಶಪಾಂಡೆ, ಜಿ.ಬಿ. ಬೇವಿನಕಟ್ಟಿ, ರಾಜು ವರ್ಣೇಕರ, ರೇಣಕಾಪ್ರಸಾದ ಹಿರೇಮಠ, ಗವಿಸಿದ್ದಯ್ಯ ಹಳ್ಳಿಕೇರಿಮಠ, ಅಂದಾನಯ್ಯ ವಿಭೂತಿ, ಎಚ್ ಎಸ್ ಸೋಂಪುರ, ಸಿದ್ದಣ್ಣ ಬಂಡಿ, ಹಬೀಬ್ ಹಾಜರಿದ್ದರು. ಡಾ. ಶರಣು ಗೋಗೇರಿ ಸ್ವಾಗತಿಸಿದರು. ಮಹಮ್ಮದರಫೀ ಯರಗುಡಿ ಕಾರ್ಯಕ್ರಮ ನಿರೂಪಿಸಿದರೆ, ಪ್ರೊ. ಹೇಮಂತ ದಳವಾಯಿ ವಂದಿಸಿದರು.

### ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ದೀಪಾವಳಿ ಚಿಂತನ, ಮೌನೇಶ್ವರ ವಚನ ಗಾಯನ

# ಶ್ರೀ ಕಾಳಿಕಾ ಮಾತೆ ಪಾಲಕಿ ಉತ್ಸವ ಸಂಪನ್ನ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಹೊಸಪೇಟ ಚೌಕ ಓಣಿಯ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಕಾಳಿಕಾ ದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ, ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳ ಮತ್ತು ಶರನ್ನವರಾತ್ರಿ ಉತ್ಸವ ಕಮಿಟಿ–2025 ಇವುಗಳ ಸಂಯುಕ್ತ ಆಶ್ರಯದಲ್ಲಿ ದೀಪಾವಳಿ ಅಮವ್ಯಾಸೆ ನಿಮಿತ್ತ ಚಿಂತನ, ಶ್ರೀ ಮೌನೇಶ್ವರ ವಚನಗಾಯನ ಮತ್ತು ಪಾಲಕಿ ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮಾರನಬಸರಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಿರಿಯ ಅಧ್ಯಾಪಕ ಸತೀಶ ಹೊರಪೇಟ ವಿಶೇಷ ಉಪನ್ಯಾಸ ನೀಡಿದರು. ಬೆಟಗೇರಿ ಎಸ್.ಎಸ್.ಕೆ ಆಂಗ್ಲ ಮಾಧ್ಯಮ ಶಾಲೆಯ 4ನೇ ತರಗತಿ ವಿದ್ಯಾರ್ಥಿ ಸಾಕ್ಷಿ ವಿನಾಯಕ ಹುಯಿಲಗೋಳ ಶ್ರೀ ಮೌನೇಶ್ವರ ವಚನಗಾಯನ ಕಾರ್ಯಕ್ರಮ ನೆಡಸಿಕೊಟ್ಟರು. ಪಾಲಕಿ ಸೇವೆ ಕಾಯಕವನ್ನು ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳದ ಅಧ್ಯಕ್ಷರಾದ ಭಾರತಿ ಸತೀಶ ಹೊರಪೇಟಿ, ಪ್ರಧಾನ ಕಾರ್ಯದರ್ಶಿ ಜ್ಯೋತಿ ವಿಶ್ವನಾಥ ಬಡಿಗೇರ(ಕಮ್ಮಾರ) ವಹಿಸಿಕೊಂಡಿದ್ದರು.

ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಶ್ರೀಧರ ಕೊಣ್ಣೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇವಸ್ಥಾನದಲ್ಲಿ ಸದಾ ಕ್ರಿಯಾತ್ಮಕವಾಗಿ ಕಾರ್ಯಕ್ರಮ ನಡೆದು ಬರಲು ಸಮಾಜದವರ ಪ್ರೋತ್ಸಾಹವೇ ಕಾರಣ ಎಂದರು.

ಕಮಿಟಿ ಉಪಾಧ್ಯಕ್ಷ ಅಶೋಕ ಸುತಾರ, ಶ್ರೀಧರ ಕೊಣ್ಣೂರ ವಿಜಯರಾಘವೇಂದ್ರ ಬೆಂತೂರ, ಮಂಜುನಾಥ ಅಕ್ಕಸಾಲಿ, ಶ್ರೀಕಾಂತ ಬೆಂತೂರ, ವಿನಾಯಕ ರಾಮದುರ್ಗಾ, ಸುಪ್ರೀತಕುಮಾರ ಕಮ್ಮಾರ ಶ್ರೀ ಕಾಳಿಕಾ ಸ್ತುತಿ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಹಿರಿಯ ದೊಡ್ಡಾಟ ಕಲಾವಿದ ಡಿ.ಎಚ್. ಸೀತಿಮನಿ, ಸಮಾಜದ ಹಿರಿಯರಾದ ಪ್ರಕಾಶ ಬಡಿಗೇರ, ನಾರಾಯಣ ಕೊಣ್ಣೂರ, ಲಕ್ಷ್ಮಣ ಬೆಂತೂರ, ರಮೇಶ ಬಡಿಗೇರ, ನಿಂಗರಾಜ ಪತ್ತಾರ, ಟ್ರಸ್ಟನ ಸಹ ಕಾರ್ಯದರ್ಶಿ ಗೋಪಾಲ ಬಡಿಗೇರ, ನಿರ್ದೇಶಕರಾದ ಶ್ರೀಕಾಂತ ಬಡಿಗೇರ, ಮಂಜುನಾಥ ಬಡಿಗೇರ, ಅರ್ಚಕ ಸುರೇಶ ಬಡಿಗೇರ ಮಹಿಳಾ ಮಂಡಳ ಮುಖಂಡರಾದ ಲಕ್ಷ್ಮಿ ಕೊಣ್ಣೂರ, ಸರೋಜ ಬೆಂತೂರ, ಲಕ್ಷ್ಮಿ ಬಡಿಗೇರ, ಕಸ್ತೂರಿ ಬಡಿಗೇರ, ನಿಖಿತಾ ಸುತಾರ, ಶಿಲ್ಪಾ ಹುಯಿಲಗೋಳ, ರಾಜೇಶ್ವರಿ ಬೆಂತೂರ, ಅಕ್ಕಮ್ಮ ಬಡಿಗೇರ ಉಪಸ್ಥಿತರಿದ್ದರು.

ಕಲಾವತಿ ಹಾವೇರಿ ಪ್ರಾರ್ಥಿಸಿದರು. ಸಾಂಸ್ಕೃತಿಕ ವಿಭಾಗದ ಸಂಚಾಲಕ ವಿಶ್ವನಾಥ ಕಮ್ಮಾರ ಸ್ವಾಗತಿಸಿದರು. ಶಿಕ್ಷಕಿ ಲತಾ ಬಡಿಗೇರ ನಿರೂಪಿಸಿದರು. ಮಂಜುನಾಥ ಅಕ್ಕಸಾಲಿ ವಂದಿಸಿದರು.



ವಿಶೇಷ ಉಪನ್ಯಾಸ ನೀಡಿದ ಸತೀಶ ಹೊರಪೇಟ ಮತ್ತು ವಚನಗಾಯನ ನಡೆಸಿಕೊಟ್ಟ ಸಾಕ್ಷಿ ಹುಯಿಲಗೋಳ ಇವರಿಗೆ ವಿಶ್ವಕರ್ಮ ಸಮಾಜದ ಬರಹಗಾರ ಗೋಪಾಲ ಬಡಿಗೇರ ವಿರಚಿತ 'ಶ್ರೀವಿಶ್ವಕರ್ಮ ಸ್ತುತಿ ಮಾಲಾ' ಗ್ರಂಥ ಸಮರ್ಪಿಸಿ ಗೌರವಿಸಲಾಯಿತು.

# ನಿಷ್ಠೆಯಿದ್ದರೆ ಸಮಾಜ ಗೌರವಿಸುತ್ತದೆ

▶▶ಮೊದಲನೇ ಪುಟದಿಂದ

ನಾಗರಾಜ ಗಡಾದ ಮಾತನಾಡಿ, ನಾಗರಾಜ ಮಾಡಳ್ಳಿಯವರು ಈ ಭಾಗದಲ್ಲಿ ಸಾಕಷ್ಟು ಕಾರ್ಯಗಳನ್ನು ಮಾಡಿದ್ದು, ಅನೇಕ ಅಪರಾಧ ಪತ್ತೆಗಾಗಿ ಅವರ ಮಾರ್ಗದರ್ಶನ ದೊರೆತಿದೆ, ಅಲ್ಲದೆ ಅನೇಕ ಪ್ರಕರಣಗಳನ್ನು ಬೇದಿಸುವ ಸಂದರ್ಭದಲ್ಲಿ ಅವರು ಪ್ರತಿಯೊಂದು ಅಂಶವನ್ನು ತಿಳಿಸಿ ಪತ್ತೆಗೆ ಮಾರ್ಗದರ್ಶನ ಮಾಡುತ್ತಿದ್ದರು. ಇದೀಗ ಅವರು ವೃತ್ತಿಯಲ್ಲಿ ಪದೋನ್ನತಿ ಹೊಂದಿರುವುದು ಅವರ ಕಾರ್ಯದಕ್ಷತೆಗೆ ಸಾಕ್ಷಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ನೂತನವಾಗಿ ಸಿಪಿಐ ಆಗಿ ಆಗಮಿಸಿರುವ ಬಿ.ವಿ. ನ್ಯಾಮಗೌಡ ಅವರನ್ನು ಸನ್ಮಾನಿಸಿ ಸ್ವಾಗತಿಸಿಲಾಯಿತು. ಸಿಪಿಐ ಬಿ.ವಿ. ನ್ಯಾಮಗೌಡ ಮಾತನಾಡಿದರು. ವೇದಿಕೆಯಲ್ಲಿ ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ ಮತ್ತಿತರರು ಇದ್ದರು. ರಂಗ್ರೇಜ್ ಸ್ವಾಗತಿಸಿ, ನಿರೂಪಿಸಿದರು.

# ಮಲ್ಲಿಗವಾಡವನ್ನು ಅಣ್ಣಿಗೇರಿ ತಾಲೂಕಿಗೆ ಸೇರಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕಿನ ಮಲ್ಲಿಗವಾಡ ಗ್ರಾಮ ಮತ್ತು ಮಲ್ಲಿಗವಾಡ ಗ್ರಾಮ ಪಂಚಾಯಿತಿಯನ್ನು ಅಣ್ಣಿಗೇರಿ ತಾಲೂಕಿಗೆ ಸೇರಿಸುವಂತೆ ಗ್ರಾಮಸ್ಥರ ಪರವಾಗಿ ಸಾಮಾಜಿಕ ಕಾರ್ಯಕರ್ತ ವೀರೇಶ ಧೂಪದಮಠ ಧಾರವಾಡ ಡಿಸಿ, ಸಿಇಒ ಅವರಿಗೆ ಮನವಿಯನ್ನು ಸಲ್ಲಿಸಿದ್ದಾರೆ.


ಕಳೆದ ಎರಡು ವರ್ಷಗಳಿಂದ ಸತತ ಬೇಡಿಕೆಯಲ್ಲಿರುವ ಅಣ್ಣಿಗೇರಿ ತಾಲೂಕಿಗೆ ಮಲ್ಲಿಗವಾಡ ಗ್ರಾಮ ಮತ್ತು ಮಲ್ಲಿಗವಾಡ ಗ್ರಾಮ ಪಂಚಾಯಿತಿಯನ್ನು ಸೇರಿಸುವ ಪ್ರಕ್ರಿಯೆ ಇದುವರೆಗೂ ಕಾರ್ಯರೂಪಕ್ಕೆ ಬರದೇ, ತಾತ್ಕಾಲಿಕ ಮುಂದೂಡಿಕೆಯಾಗುತ್ತಿದೆ. ಮಲ್ಲಿಗವಾಡ ಗ್ರಾಮ, ಮಲ್ಲಿಗವಾಡ ಗ್ರಾಮ ಪಂಚಾಯಿತಿಯನ್ನು ಅಣ್ಣಿಗೇರಿ ತಾಲೂಕಿಗೆ ಸೇರಿಸುವಂತೆ ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ್ ಅವರ ವರದಿ ಮತ್ತು ಕರ್ನಾಟಕ ಸರಕಾರ ಮತ್ತು ಕಂದಾಯ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅವರು ಆದೇಶ ಹೊರಡಿಸಿದ್ದಾರೆ. ಈ ಆದೇಶದನ್ವಯ ಕ್ರಮ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ಡಾ. ಕುಬೇರಪ್ಪ ಅರ್ಜಿ ಸಲ್ಲಿಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಶಿಕ್ಷಕರು ಹಾಗೂ ಪದವೀಧರ ಘಟಕದ ನಿಕಟಪೂರ್ವ ರಾಜ್ಯಾಧ್ಯಕ್ಷರಾದ ರಾಣೇಬೆನ್ನೂರಿನ ಡಾ. ಆರ್. ಎಂ. ಕುಬೇರಪ್ಪ ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷದ ಟಿಕೆಟ್ ಬಯಸಿ ಬೆಂಗಳೂರಿನ ಕೆಪಿಸಿಸಿ ಕಛೇರಿಯಲ್ಲಿ ಅಧಿಕೃತ ಅರ್ಜಿ ಸಲ್ಲಿಸಿದರು.

ಕಳೆದ 2020ರ ಚುನಾವಣೆಯಲ್ಲಿ ಸದರಿ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿದ್ದ ಡಾ. ಕುಬೇರಪ್ಪ, 28 ಕ್ಷೇತ್ರಗಳಲ್ಲಿ ಕೇವಲ 3-4 ಶಾಸಕರಿದ್ದ ಸಂದರ್ಭದಲ್ಲಿ ಪಕ್ಷಕ್ಕಾಗಿ ದುಡಿದಿದ್ದಾರೆ. ಈಗ ರಾಜಕೀಯ ಪರಿಸ್ಥಿತಿ ನಮ್ಮ ಪರವಾಗಿದ್ದು, ಇಡೀ ಕ್ಷೇತ್ರದಲ್ಲಿ ಅತಿಹೆಚ್ಚು ಕಾಂಗ್ರೆಸ್ ಶಾಸಕರನ್ನು ಹೊಂದಿದ್ದು, ನಿರುದ್ಯೋಗಿ ಪದವೀಧರರಿಗೆ ಯುವನಿಧಿಯಲ್ಲಿ ಭತ್ಯೆ ನೀಡಲಾಗುತ್ತಿದೆ. ಕ್ಷೇತ್ರದಲ್ಲಿ ತಮ್ಮ ಬಗ್ಗೆ ಮತದಾರರ ಒಲವಿದೆ. ತಮಗೆ ಪಕ್ಷ ಮತ್ತೊಮ್ಮೆ ಅವಕಾಶ ನೀಡಬೇಕು ಎಂದು ಅರ್ಜಿ ಸಲ್ಲಿಸಿದ್ದಾಗಿ ಡಾ. ಕುಬೇರಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಹನಮಂತಗೌಡ ಕಲ್ಮನಿ, ಆರ್. ಗೋಪಾಲ ರೆಡ್ಡಿ, ಎಸ್.ಹೆಚ್. ಹುಚಗೊಂಡರ ಹಾಗೂ ಶಿಕ್ಷಕರ ಸಂಘಟನೆಯ ರಾಜ್ಯಮಟ್ಟದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಆಕ್ಷೇಪಣಾ ಮಾದರಿ ಪತ್ರ ಸಲ್ಲಿಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಂಚೆ ಕಚೇರಿಯಲ್ಲಿ ಶನಿವಾರ ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘ ಲಕ್ಷ್ಮೇಶ್ವರ ಘಟಕ, ಕ.ರಾ.ಪ್ರಾ ಶಾಲಾ ಪದವೀಧರರ ಶಿಕ್ಷಕರ ಸಂಘ ಲಕ್ಷ್ಮೇಶ್ವರ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಲಕ್ಷ್ಮೇಶ್ವರ ಶಾಖೆಯ ವತಿಯಿಂದ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಆಕ್ಷೇಪಣಾ ಮಾದರಿ ಪತ್ರವನ್ನು ಸಲ್ಲಿಸಿದರು.

ತಾಲೂಕಿನ 323 ಶಿಕ್ಷಕರ ಆಕ್ಷೇಪಣೆಗಳ ಮನವಿಗಳನ್ನು ಸರಕಾರಕ್ಕೆ ರವಾನಿಸಲಾಯಿತು. ಈ ಸಂದರ್ಭದಲ್ಲಿ ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ, ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಕ.ರಾ.ಸ.ನೌ ಸಂಘದ ಪ್ರಧಾನ ಕಾರ್ಯದರ್ಶಿ ಎಮ್.ಎ. ನದಾಫ್, ಶಾಲಾ ಪದವೀಧರರ ಶಿಕ್ಷಕರ ಸಂಘದ ಅಧ್ಯಕ್ಷ ಎಮ್.ಡಿ. ವಾರದ, ಪ್ರಧಾನ ಕಾರ್ಯದರ್ಶಿ ಬಿ.ಎಮ್. ಯರಗುಪ್ಪಿ, ಬಿ.ಬಿ. ಯತ್ತಿನಹಳ್ಳಿ, ಗೀತಾ ಹಳ್ಯಾಳ, ಎಲ್. ಎನ್. ನಂದೆಣ್ಣವರ, ಎಮ್.ಎಸ್. ಹಿರೇಮಠ, ಎನ್.ಪಿ.ಎಸ್ ಅಧ್ಯಕ್ಷ ಎಫ್.ಎಸ್. ತಳವಾರ, ಬಿ.ಎಮ್. ಕುಂಬಾರ, ಡಿ.ಡಿ. ಲಮಾಣಿ, ಎಮ್.ಎಸ್. ಚಾಕಲಬ್ಬಿ, ಎಮ್. ಎನ್. ಭರಮಗೌಡರ, ಎಫ್.ಪಿ. ಡಂಬಳ, ಎಸ್.ಎಸ್. ಸಜ್ಜಗಾರ, ಎ.ಎಮ್. ಅಕ್ಕಿ ಸೇರಿದಂತೆ ಶೈಕ್ಷಣಿಕ ಸಂಘಗಳ ಸರ್ವ ಪದಾಧಿಕಾರಿಗಳು ಹಾಜರಿದ್ದರು.

# ಕೋಟಾ: ಪರೀಕ್ಷೆಯಲ್ಲಿ ಕಡಿಮೆ ಅಂಕ ಪಡೆದ ಎಂಬಿಬಿಎಸ್ ವಿದ್ಯಾರ್ಥಿನಿ ಆತ್ಮಹತ್ಯೆಗೆ ಶರಣು

■ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ

ರಾಜಸ್ಥಾನದ ಕೋಟಾದಿಂದ ಮತ್ತೊಂದು ದುರಂತ ಘಟನೆ ವರದಿಯಾಗಿದೆ, ಸರ್ಕಾರಿ ವೈದ್ಯಕೀಯ ಕಾಲೇಜಿನ ಮೂರನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿನಿ ಶುಕ್ರವಾರ ಆಕಾಶವಾಣಿ ಕಾಲೋನಿಯಲ್ಲಿರುವ ತನ್ನ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಹೇಳಲಾಗಿದೆ. ಪ್ರಾಚಿ ಮೀನಾ ಇತ್ತೀಚಿನ ಪರೀಕ್ಷೆಗಳಲ್ಲಿ ಕಡಿಮೆ ಅಂಕಗಳನ್ನು ಪಡೆದ ನಂತರ ಖಿನ್ನತೆಯಿಂದ ಬಳಲುತ್ತಿದ್ದರು ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.

ಆಲ್ ಇಂಡಿಯಾ ರೇಡಿಯೊದ ಉದ್ಯೋಗಿಯಾಗಿರುವ ಆಕೆಯ ತಂದೆ ಪ್ರಸ್ತುತ ಝಾಲಾವರ್‌ನಲ್ಲಿ ನಿಯೋಜನೆಗೊಂಡಿದ್ದಾರೆ. ಆದರೆ, ಅವರ ಕುಟುಂಬವು ದೌಸಾ ಜಿಲ್ಲೆಯವರು. ಪ್ರಾಚಿ ತನ್ನ ಮೂವರು ಸಹೋದರರೊಂದಿಗೆ ಸರ್ಕಾರಿ ಕ್ವಾರ್ಟರ್‌ನಲ್ಲಿ ವಾಸಿಸುತ್ತಿದ್ದರು. ಶುಕ್ರವಾರ ಮಧ್ಯಾಹ್ನ ಆಕೆ ತನ್ನ ಮನೆಯಲ್ಲಿ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

### ಮಾಧ್ಯಮ ಅಕಾಡೆಮಿಯಲ್ಲಿ ಟಿ.ಜೆ.ಎಸ್ ಜಾರ್ಜ್ ದತ್ತಿ ರಾಷ್ಟ್ರೀಯ ಪ್ರಶಸ್ತಿ ಘೋಷಿಸಿದ ಕೆ. ಶಿವಕುಮಾರ್

# ನಾನಿನ್ನೂ ಪತ್ರಿಕೋದ್ಯಮದಿಂದ ಹೊರ ಬಂದಿಲ್ಲ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಹಿರಿಯ ಪತ್ರಕರ್ತ ಟಿ.ಜೆ.ಎಸ್ ಜಾರ್ಜ್ ಅವರ ಹೆಸರಿನಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಮಾಧ್ಯಮ ಸಂಸ್ಥೆಗಳ ಸಂಪಾದಕರಿಗೆ ದತ್ತಿ ಪ್ರಶಸ್ತಿ ಸ್ಥಾಪಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್ ಘೋಷಿಸಿದರು.

ಅವರು ಶನಿವಾರ ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ತಾವು ಈಗಾಗಲೇ ಸಾಮಾಜಿಕ ನ್ಯಾಯದ ಕುರಿತು ಬರೆಯುವ ಅಂಕಣಕಾರರಿಗೆ 'ಡಾ. ಬಿ.ಆರ್. ಅಂಬೇಡ್ಕರ್ ದತ್ತಿ ಪ್ರಶಸ್ತಿ'ಯನ್ನು ಸ್ಥಾಪಿಸಿದ್ದು, ಇತ್ತೀಚೆಗೆ ನಿಧನರಾದ ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರು ನಿಷ್ಪಕ್ಷಪಾತಿ ಪತ್ರಕರ್ತರಾಗಿದ್ದರು. ಅವರು ಸ್ವತಃ ಪತ್ರಕರ್ತರ ವರದಿಗಳನ್ನು ತಿದ್ದಿ, ಮಾರ್ಗದರ್ಶನ ನೀಡುತ್ತಿದ್ದರು. ಅವರ ಹೆಸರಿನಲ್ಲಿ ರಾಷ್ಟ್ರಮಟ್ಟದಲ್ಲಿ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವ ಪತ್ರಕರ್ತರನ್ನು ಗುರುತಿಸುವ ಸಲುವಾಗಿ 1.5 ಲಕ್ಷ ರೂ.ಗಳ ದತ್ತಿನಿಧಿ ಸ್ಥಾಪಿಸುವುದಾಗಿ ತಿಳಿಸಿದರು. ತಾವು ಇನ್ನೂ ಪತ್ರಿಕೋದ್ಯಮದಿಂದ ಹೊರ ಬಂದಿಲ್ಲ. ಸದನದಲ್ಲಿಯೂ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಕುರಿತು ದನಿ ಎತ್ತುವುದಾಗಿ ಅವರು ತಿಳಿಸಿದರು. ತಮ್ಮ ಪತ್ರಕರ್ತ ವೃತ್ತಿ ಜೀವನ ಹಾಗೂ ಅಕಾಡೆಮಿಯ ಸದಸ್ಯರಾಗಿ ಕಾರ್ಯನಿರ್ವಹಣೆಯ ಸಂದರ್ಭಗಳನ್ನು ಮೆಲುಕು ಹಾಕಿದ ಶಿವಕುಮಾರ್, ಅಕಾಡೆಮಿಯ ಚಟುವಟಿಕೆಗಳಿಗೆ ಸದಾ ಬೆಂಬಲ ನೀಡುವುದಾಗಿ ತಿಳಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ, ಶಿವಕುಮಾರ್ ಅವರು ಮೂರು ದಶಕಗಳಿಂದ ಪತ್ರಕರ್ತರಾಗಿ ಕಾರ್ಯನಿರ್ವಹಿಸಿದ್ದು, ತಮ್ಮ ನಿಷ್ಠುರ ವರದಿಗಳಿಗಾಗಿ ಹೆಸರುವಾಸಿಯಾಗಿದ್ದಾರೆ. ಅವರು ಇಂದು ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿರುವುದು ಪತ್ರಕರ್ತರಿಗೆಲ್ಲ ಹೆಮ್ಮೆಯ ವಿಷಯ. ಅವರು ಅಕಾಡೆಮಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದು, ಅವರ ಬೆಂಬಲ ಪತ್ರಕರ್ತರಿಗೆ ಸದಾ ಇರುವುದೆಂಬ ವಿಶ್ವಾಸ ವ್ಯಕ್ತಪಡಿಸಿದರು. ಸದಸ್ಯರಾದ ಕೆ. ನಿಂಗಜ್ಜ, ಕೆ. ವೆಂಕಟೇಶ್, ಶಿವಾನಂದ ತಗಡೂರು, ಅಬ್ಬಾಸ್ ಮುಲ್ಲಾ ಮೊದಲಾದವರು ಶಿವಕುಮಾರ್ ಅವರ ಕುರಿತು ಮಾತನಾಡಿದರು.

**ನುರಿತ ತಂಡದಿಂದ ಬೀದಿ ನಾಯಿಗಳನ್ನು ಸೆರೆ ಹಿಡಿಯುವ ಕಾರ್ಯಾಚರಣೆ ಆರಂಭ | ನಿಟ್ಟುಸಿರು ಬಿಟ್ಟ ಪುಟಾಣಿಗಳು, ಪಾಲಕರು**

# ನಾಯಿಗಳಿಗೆ ಬಲೆ ಬೀಸಿದ ನಗರಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಅಟ್ಟಹಾಸ ಮಿತಿಮೀರಿದೆ. ಒಂದು ತಿಂಗಳಲ್ಲಿ ಮೂರು ಮಕ್ಕಳ ಮೇಲೆ ದಾಳಿ ಮಾಡಿ ಗಂಭೀರವಾಗಿ ಗಾಯಗೊಳಿಸಿವೆ. ರಕ್ಕಸ ನಾಯಿಗಳ ದಾಳಿಗೆ ಮಕ್ಕಳು ಆಸ್ಪತ್ರೆಯಲ್ಲಿ ಒದ್ದಾಡುತ್ತಿದ್ದಾರೆ. ಇದೀಗ ಎಚ್ಚೆತ್ತಿರುವ ನಗರಸಭೆಯ ಅಧಿಕಾರಿಗಳು ಬೀದಿ ನಾಯಿಗಳನ್ನು ಸೆರೆಹಿಡಿಯುವ, ಸಂತಾನ ಹರಣ ಚಿಕಿತ್ಸೆ ನಡೆಸುವ ಕಾರ್ಯಾಚರಣೆ ಕೈಗೊಂಡಿದೆ.

ರೌಡಿ ನಾಯಿಗಳನ್ನು ಮಟ್ಟಹಾಕಲು, ಎಂಥಹ ಕಿಲಾಡಿ ನಾಯಿಗಳಿದ್ದರೂ ಕೂಡ ಕ್ಷಣಾರ್ಧದಲ್ಲಿ ಸೆರೆಹಿಡಿಯುವ ಉತ್ತರ ಪ್ರದೇಶದ ಅನಿಮಲ್ ರೈಟ್ಸ್ ಫಂಡ್ ಏಜೆನ್ಸಿಯ ನುರಿತ ತಂಡವನ್ನು ತರೆತರಲಾಗಿದ್ದು, ಶನಿವಾರದಿಂದ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ. ನಾಯಿ ಸೆರೆ ಕಾರ್ಯಾಚರಣೆಯನ್ನು ಸಾರ್ವಜನಿಕರು ಕುತೂಹಲದಿಂದ ವೀಕ್ಷಿಸಿದರು.

> ಗದಗ-ಬೆಟಗೇರಿ ಅವಳಿ ನಗರದಲ್ಲಿ ಹೆಜ್ಜೆ ಹೆಜ್ಜೆಗೂ ಬೀದಿ ನಾಯಿಗಳ ಗ್ಯಾಂಗ್ ನೋಡಿ ಜನರು ಭಯಪಡುತ್ತಿದ್ದರು. ಎಲ್ಲಿ ನಮ್ಮ ಮೇಲೆ ದಾಳಿ ಮಾಡುತ್ತವೆಯೋ ಎಂಬ ಭಯದಲ್ಲಿ ಜನ ಓಡಾಡುತ್ತಿದ್ದರು.
> ಈಗ ನಗರಸಭೆಯ ಆಪರೇಷನ್ ಡಾಗ್ ಕಾರ್ಯಾಚರಣೆಯಿಂದ ಅವಳಿ ನಗರದ ಜನರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.
> – ಅನಂದ ಬದಿ.
> ನಗರಸಭೆ ಅಭಿಯಂತರು, ಗದಗ.

ಬೀದಿ ನಾಯಿಗಳು ಚಿಕ್ಕ ಮಕ್ಕಳನ್ನೇ ಗುರಿಯಾಗಿಸಿ ದಾಳಿ ನಡೆಸುತ್ತಿದ್ದವು. ಇದರಿಂದ ಮಕ್ಕಳನ್ನು ಮನೆಬಿಟ್ಟು ಹೊರಗೆ ಕಳಿಸಲು ಪಾಲಕರು ಭಯಪಡುವ ಸ್ಥಿತಿ ನಿರ್ಮಾಣವಾಗಿತ್ತು. ಒಂದೇ ತಿಂಗಳಲ್ಲಿ ಮೂವರು ಮಕ್ಕಳ ಮೇಲೆ ದಾಳಿ ಮಾಡಿದ್ದ ಬೀದಿ ನಾಯಿಗಳು ಅವಳಿ ನಗರದ ಜನರಲ್ಲಿ ಭಯ ಹುಟ್ಟಿಸಿದ್ದವು, ನಗರಸಭೆಯ ನಿರ್ಲಕ್ಷ್ಯಕ್ಕೆ ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದರು.

ಫೆಬ್ರುವರಿ 5ರಂದು ರಹಮತ್ ನಗರದಲ್ಲಿ 4 ವರ್ಷದ ಮಗುವಿನ ಮೇಲೆ ನಾಯಿಗಳು ದಾಳಿ ನಡೆಸಿ,



ಮುಖ, ಕತ್ತು, ಎದೆ ಭಾಗವನ್ನು ಗಾಯಗೊಳಿಸಿದ್ದವು. ಸೆಪ್ಟಂಬರ್ 9ರಂದು ಗದಗ ನಗರದ ಪಂಚಾಳ ನಗರದಲ್ಲಿ 6 ವರ್ಷದ ಬಾಲಕಿಯ ಮೇಲೆ ದಾಳಿ ಮಾಡಿ ಕಣ್ಣು, ತಲೆ, ಕೈಗೆ ಕಚ್ಚಿ ನಾಯಿಗಳು ಅಟ್ಟಹಾಸ ಮೆರೆದಿದ್ದವು. ಅಕ್ಟೊಬರ್ 12ರಂದು ಬೆಟಗೇರಿಯ ಕುರಹಟ್ಟಿ ಪೇಟೆಯಲ್ಲಿ 6 ವರ್ಷದ ಬಾಲಕನ ಮೇಲೆ ದಾಳಿ ಮಾಡಿದ್ದವು. ಈಗ ಗದಗ-ಬೆಟಗೇರಿ ಅವಳಿ ನಗರದಲ್ಲಿನ ಬೀದಿ ನಾಯಿಗಳನ್ನು ಹಿಡಿದು, ಅವುಗಳಿಗೆ ಸಂತಾನ ಹರಣ ಚಿಕಿತ್ಸೆ ನಡೆಸಿ ಆ್ಯಂಟಿ ರೇಬಿಸ್ ಲಸಿಕೆ ನೀಡಲಾಗುತ್ತಿದೆ.

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸುಮಾರು 3 ಸಾವಿರ ಬೀದಿ ನಾಯಿಗಳಿವೆ ಎಂಬ ವಿಚಾರ ನಗರಸಭೆ ನಡೆಸಿದ ಸರ್ವೆಯಲ್ಲಿ ತಿಳಿದುಬಂದಿತ್ತು. ಮೊದಲ ಹಂತದಲ್ಲಿ 450 ನಾಯಿಗಳನ್ನು ಹಿಡಿಯಲಾಗುತ್ತಿದ್ದು, ಪ್ರತಿದಿನ 25 ನಾಯಿಗಳನ್ನು ಸೆರೆ ಹಿಡಿಯುವ ಯೋಜನೆ ರೂಪಿಸಲಾಗಿದೆ.

ಕಾರ್ಯಾಚರಣೆಯ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಸಭೆ ಸದಸ್ಯರಾದ ಚಂದ್ರು ಕರಿಸೋಮನಗೌಡ್ರ, ಇಮ್ತಿಯಾಜ್ ಶಿರಹಟ್ಟಿ, ನಗರಸಭೆ ಆಯುಕ್ತರಾದ ರಾಜಾರಾಮ್ ಪವಾರ್, ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಆನಂದ್ ಬದಿ, ಹಿರಿಯ ಆರೋಗ್ಯ ನಿರೀಕ್ಷಕರಾದ ಎಂ.ಎಂ. ಮಕಾಂದಾರ್, ನಗರಸಭೆ ಸಿಬ್ಬಂದಿ ವರ್ಗದವರು ಹಾಗೂ ಅನಿಮಲ್ ರೈಟ್ಸ್ ಫಂಡ್ ಏಜೆನ್ಸಿಯವರು ಹಾಜರಿದ್ದರು.

## ಕೆ.ಬಿ. ಬೆನಕನವಾರಿಗೆ 'ಕನ್ನಡ ನುಡಿಸಿರಿ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಧಾರವಾಡದ ಚೇತನ ಪ್ರತಿಷ್ಠಾನ ಇವರಿಂದ ಪ್ರತಿವರ್ಷ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕ ವೃತ್ತಿಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿ, ಅಮೋಘ ಸಾಧನೆ ಮಾಡಿದ ಕನ್ನಡ ಭಾಷಾ ಶಿಕ್ಷಕರನ್ನು ಹಾಗೂ ಕನ್ನಡ ನಾಡು-ನುಡಿಗೆ ಸೇವೆ ಸಲ್ಲಿಸಿ ಸಾಧನೆ ಮಾಡಿದ ಕನ್ನಡಿಗರನ್ನು ಗುರುತಿಸಿ ಕೊಡಮಾಡುವ 'ಕನ್ನಡ ನುಡಿಸಿರಿ' ಪ್ರಶಸ್ತಿಗೆ ತಾಲೂಕಿನ ರಾಜೂರಿನ ಶ್ರೀ ಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳಾದ ಕೆ.ಬಿ. ಬೆನಕನವಾರಿ ಭಾಜನರಾಗಿದ್ದಾರೆ.

ದಾವಣಗೆರೆಯ ರೋಟರಿ ಬಾಲಭವನದಲ್ಲಿ ಅ.26ರಂದು ಚೇತನ ಪ್ರತಿಷ್ಠಾನ ಆಯೋಜಿಸಿರುವ 'ದಾವಣಗೆರೆ ನುಡಿ ಸಡಗರ' ಕಾರ್ಯಕ್ರಮದ ಕವಿಗೋಷ್ಠಿ,



ಸರ್ವಾಧ್ಯಕ್ಷರೊಂದಿಗೆ ಸಂವಾದ, ನೃತ್ಯ, ಗೀತ ಗಾಯನ, ಹೆಚ್ಚೆಸ್ವಿ ನುಡಿಸಿರಿ ಪ್ರಶಸ್ತಿ, ಕನ್ನಡ ನುಡಿಸಿರಿ ಪ್ರಶಸ್ತಿ, ಶಿಕ್ಷಕ ರತ್ನ ರಾಜ್ಯಪ್ರಶಸ್ತಿ ಹಾಗೂ ಕರ್ನಾಟಕದ ಅತ್ಯುತ್ತಮ 5 ಶಾಲೆಗಳಿಗೆ ಹಮ್ಮಿಕೊಂಡಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೆ.ಬಿ. ಬೆನಕನವಾರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಗ್ಯಾಸ್ ಗೀಸರ್ ಸೋರಿಕೆ: ಉಸಿರುಗಟ್ಟಿ ಅಕ್ಕ-ತಂಗಿ ದಾರುಣ ಸಾವು!

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದಲ್ಲಿ ಬಾತ್‌ರೂಂನಲ್ಲಿ ಗ್ಯಾಸ್ ಗೀಸರ್ ಸೋರಿಕೆಯಾದ ಪರಿಣಾಮ ಉಸಿರುಗಟ್ಟಿ ಅಕ್ಕ-ತಂಗಿ ಸಾವನ್ನಪ್ಪಿದ ಘಟನೆ ಜರುಗಿದೆ.

ಮೃತರನ್ನು 23 ವರ್ಷದ ಗುಲ್ಫರ್ಮ್ ತಾಜ್, 20 ವರ್ಷದ ಸಿಮ್ರಾನ್ ತಾಜ್ ಎಂದು ಗುರುತಿಸಲಾಗಿದೆ. ಗ್ಯಾಸ್ ಗೀಸರ್‌ನಿಂದ ಕಾರ್ಬನ್ ಮೋನಾಕ್ಸೈಡ್ ಸೋರಿಕೆಯಾಗಿ ಘಟನೆ ಸಂಭವಿಸಿದೆ. ಗುಲ್ಫಾರ್ಮ್, ಸಿಮ್ರಾನ್ ತಾಜ್ ಇಬ್ಬರೂ ಒಟ್ಟಿಗೆ ಬಾತ್‌ರೂಂಗೆ ಹೋದಾಗ ಘಟನೆ ನಡೆದಿದೆ. ಬಹಳ ಹೊತ್ತು ಕಳೆದರು ಬಾತ್‌ರೂಂನಿಂದ ಅಕ್ಕ, ತಂಗಿ



ಹೊರಬಾರದ ಹಿನ್ನೆಲೆ ತಂದೆ ಅಲ್ತಾಫ್ ಅನುಮಾನಗೊಂಡು ಬಾಗಿಲು ಬಡಿದಿದ್ದಾರೆ. ಆಗಲೂ ಬಾಗಿಲು ತೆಗೆದಿಲ್ಲ. ಈ ವೇಳೆ ಬಾಗಿಲು ಒಡೆದು ನೋಡಿದಾಗ ಮಕ್ಕಳಿಬ್ಬರು ಅರೆಪ್ರಜ್ಞಾವಸ್ಥೆಯಲ್ಲಿರೋದು ಗೊತ್ತಾಗಿದೆ.

ತಕ್ಷಣವೇ ಮಕ್ಕಳನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ ಅಷ್ಟು ಹೊತ್ತಿಗಾಗಲೇ ಇಬ್ಬರೂ ಮೃತಪಟ್ಟಿದ್ದರು.

ಕೋಣೆಯಲ್ಲಿ ಕಿಟಕಿ ಇರದ ಹಿನ್ನೆಲೆ ಉಸಿರುಗಟ್ಟಿದೆ ಎನ್ನಲಾಗಿದೆ. ಪಿರಿಯಾಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

## ಪೌರಕಾರ್ಮಿಕರನ್ನು ಗೌರವದಿಂದ ಕಾಣಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದಿನನಿತ್ಯ ಪಟ್ಟಣದ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡು ಸೇವೆ ನಿರ್ವಹಿಸುತ್ತಿರುವ ಪೌರಕಾರ್ಮಿಕರು, ಹಬ್ಬ ಹರಿದಿನಗಳೆನ್ನದೆ ತಮ್ಮ ಕಾರ್ಯ ಮಾಡುತ್ತಿದ್ದು, ಪೌರಕಾರ್ಮಿಕರ ಅನುಪಸ್ಥಿತಿಯನ್ನು ಕಲ್ಪಿಸಿಕೊಳ್ಳಲೂ ಸಾಧ್ಯವಿಲ್ಲ. ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ಕಾರ್ಯ ನಿರ್ವಹಿಸುವ ಪೌರಕಾರ್ಮಿಕರನ್ನು ಎಲ್ಲರೂ ಗೌರವದಿಂದ ಕಾಣಬೇಕು ಎಂದು ವರ್ತಕ ಗಂಗಾಧರಯ್ಯ ಪುರಾಣಿಕಮಠ ಹೇಳಿದರು.

ಅವರು ಪಟ್ಟಣದ ಪೇಟೆ ಹನುಮಂತದೇವರ ದೇವಸ್ಥಾನದ ಹತ್ತಿರವಿರುವ ತಮ್ಮ ಅಂಗಡಿಯಲ್ಲಿ ದೀಪಾವಳಿ ಪ್ರಯುಕ್ತ ಪಟ್ಟಣದ ಪುರಸಭೆ ಪೌರಕಾರ್ಮಿಕರನ್ನು ಆಹ್ವಾನಿಸಿ, ಅವರಿಗೆ ಬಟ್ಟೆ, ಉಡುಗರೆ ನೀಡಿ ಸನ್ಮಾನಿಸಿ




ಮಾತನಾಡಿದರು.

ಪೌರಕಾರ್ಮಿಕರಿಗೂ ಕುಟುಂಬವಿದ್ದು, ಅವರು ಸಹ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಳ್ಳುವ ತವಕದಲ್ಲಿರುತ್ತಾರೆ.

ಆದರೂ ಸಹ ಊರಿನ ಸ್ವಚ್ಛತೆಯ ಕಲ್ಪನೆಯ ಹಿನ್ನೆಲೆಯಲ್ಲಿ ಹಬ್ಬವನ್ನು ಸರಿಯಾಗಿ ಆಚರಿಸದೆ ತಮ್ಮ ಕಾರ್ಯದಲ್ಲಿ ತೊಡಗಿರುವದು ಮೆಚ್ಚುವ ಸಂಗತಿಯಾಗಿದ್ದು, ಅವರ ಕಾರ್ಯಕ್ಕೆ ಪ್ರತಿಯೊಬ್ಬರೂ ಗೌರವ ನೀಡುವದು ಅಗತ್ಯವಾಗಿದೆ. ಹಬ್ಬದ ಸಂಭ್ರಮವನ್ನು ಪೌರಕಾರ್ಮಿಕರೊಂದಿಗೆ ಆಚರಿಸಿಕೊಂಡಿರುವದು ತೃಪ್ತಿ ತಂದಿದೆ ಎಂದರು.

## ಕಿತ್ತೂರು ಚೆನ್ನಮ್ಮಳ ನಾಣ್ಯ ಬಿಡುಗಡೆಗೆ ಹರ್ಷ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮನ್ನಾಳಿದ ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದ ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತಿಗೆ ಈ ವರ್ಷ 200 ವರ್ಷಗಳು. ಇದು ವಿಶೇಷ ವರ್ಷವಾಗಿರುವುದರಿಂದ ಚೆನ್ನಮ್ಮಾಜಿಯ ಅಂಚೆ ಚೀಟಿಯ ಬದಲಾಗಿ ಕೇಂದ್ರ ಸರಕಾರವು 200ರೂ.ಗಳ ನಾಣ್ಯವನ್ನು ಬಿಡುಗಡೆ ಮಾಡಿ ಚೆನ್ನಮ್ಮಾಜಿಯ ಸ್ಮರಣೆಯನ್ನು ಚಿರಸ್ಮರಣೀಯವಾಗಿಸಿದೆ. ಅದಕ್ಕಾಗಿ ಕೇಂದ್ರ ಸರಕಾರವನ್ನು ತಾವು ಹೃತ್ಪೂರ್ವಕವಾಗಿ ಅಭಿನಂದಿಸುವುದಾಗಿ ಚನ್ನು ಪಾಟೀಲ ಫೌಂಡೇಷನ್ ಸಂಸ್ಥಾಪಕ ಉಮೇಶ ಚನ್ನು ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಚನ್ನಮ್ಮಾಜಿ ಕೇವಲ ಒಂದು ವರ್ಗಕ್ಕೆ ಮಾತ್ರ ಸೀಮಿತಳಾಗಿರದೆ ಇಡೀ ನಾರಿ ಕುಲಕ್ಕೆ ಮಾದರಿಯಾಗಿದ್ದಾಳೆ. ಅವಳ ಧೈರ್ಯ, ಸಾಹಸದ ಕಥನಗಳನ್ನು ಓದಿ, ಇಂದಿನ ಮಹಿಳೆಯರು ತಮ್ಮ ಜೀವನದಲ್ಲಿಯೂ ಅಳವಡಿಸಿಕೊಳ್ಳಬೇಕಿದೆ. ಅವಳಂತೆ ಜಗತ್ತಿನ ಎಲ್ಲ ಮಹಿಳಾ ವರ್ಗದವರೂ ತಮ್ಮಲ್ಲಿ ಸಾಹಸದ ಜೊತೆಗೆ ಧೈರ್ಯದ ಗುಣಗಳನ್ನು ಅಳವಡಿಸಿಕೊಳ್ಳಬೇಕಿದೆ ಎಂದಿದ್ದಾರೆ.


200ನೇ ವರ್ಷದ ವಿಜಯೋತ್ಸವದ ಅಂಗವಾಗಿ ದೆಹಲಿಯಲ್ಲಿ ಇತ್ತೀಚೆಗೆ ನಡೆದ ಕಾರ್ಯಕ್ರಮದಲ್ಲಿ 200 ರೂ. ನಾಣ್ಯವನ್ನು ಕೇಂದ್ರ ಸಚಿವರಾದ ಗಜೇಂದ್ರಸಿಂಗ್ ಶೇಖಾವತ್‌ಜೀ ಬಿಡುಗಡೆ ಮಾಡಿ ಕಿತ್ತೂರು ಚೆನ್ನಮ್ಮಳ ಸಮಸ್ತ ಅಭಿಮಾನಿಗಳಿಗೆ ಸಂತೋಷವನ್ನುಂಟು ಮಾಡಿದ್ದಾರೆ. ಈ ಸಂದರ್ಭದಲ್ಲಿ ಹರಿಹರ ಪಂಚಮಸಾಲಿ ಪೀಠದ ಜ. ವಚನಾನಂದ ಶ್ರೀಗಳೂ ಹಾಜರಿದ್ದುದು ಸಂತಸ ನೀಡಿದೆ. ಇಂತಹ ಐತಿಹಾಸಿಕ ನಿರ್ಣಯವನ್ನು ಕೈಗೊಂಡ ಕೇಂದ್ರ ಸರಕಾರವನ್ನು ತಾವು ಅಭಿನಂದಿಸುವುದಾಗಿ ಉಮೇಶ ಪಾಟೀಲ ತಿಳಿಸಿದ್ದಾರೆ.

## ಭೀಕರ ಸಿಲಿಂಡರ್ ಸ್ಫೋಟ: ನೆಲಸಮಗೊಂಡ ಕಟ್ಟಡ, ಓರ್ವ ಸಾವು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಕೆ.ಆರ್ ಪುರಂನ ತ್ರಿವೇಣಿ ನಗರದಲ್ಲಿ ಭೀಕರ ಸಿಲಿಂಡರ್ ಸ್ಫೋಟಕ್ಕೆ ಬೃಹತ್ ಕಟ್ಟಡವೇ ನೆಲಸಮಗೊಂಡಿದ್ದು, ಓರ್ವ ಸಾವನ್ನಪ್ಪಿರುವ ಘಟನೆ ಜರುಗಿದೆ.

ಸ್ಫೋಟದ ತೀವ್ರತೆಗೆ ಭಾರೀ ಕಟ್ಟಡವೇ ನೆಲಸಮ ಆಗಿದೆ. ಅಕ್ಕಪಕ್ಕದ ಮನೆಗಳ ಕಿಟಕಿಗಳು ಹಾನಿಯಾಗಿದೆ. ಈ ವೇಳೆ ಮನೆಯಲ್ಲಿದ್ದ ಓರ್ವ ಸಾವನ್ನಪ್ಪಿದ್ದು, ಮೂವರು ಗಂಭೀರ ಗಾಯಗೊಂಡಿದ್ದಾರೆ.



ಬೆಳಗ್ಗೆ 7 ಗಂಟೆ ಸುಮಾರಿಗೆ ಘಟನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ.

ಸದ್ಯ ಘಟನಾ ಸ್ಥಳಕ್ಕೆ ಕೆ.ಆರ್ ಪುರಂ ಪೊಲೀಸರು, ಬಾಂಬ್ ಸ್ಕ್ವಾಡ್ ಹಾಗೂ ಡಾಗ್ ಸ್ಕ್ವಾಡ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಆರ್‌ಎಸ್‌ಎಸ್‌ನಿಂದ ದೂರ ಉಳಿಯುವ ಪ್ರಶ್ನೆಯೇ ಇಲ್ಲ

▶▶ಮೊದಲನೇ ಪುಟದಿಂದ

ಸರ್ಕಾರದ ಎದುರು ಸಾಕಷ್ಟು ಸಮಸ್ಯೆಗಳಿವೆ. ಅದಕ್ಕೆ ಪರಿಹಾರ ಕೊಡುವುದನ್ನು ಬಿಟ್ಟು ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿ ಸಂಸದರ ಕುರಿತು ಸಿಎಂ ಸಿದ್ದರಾಮಯ್ಯ ನೀಡಿರುವ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರ ಆರ್ಥಿಕ ದುಸ್ಥಿತಿಯಲ್ಲಿದೆ. ಅದನ್ನು ಮುಚ್ಚಿಕೊಳ್ಳಲು ಆರೋಪ ಮಾಡುತ್ತಿದ್ದಾರೆ. ಕೋವಿಡ್ ಸಂದರ್ಭದಲ್ಲಿ ರಾಜ್ಯಕ್ಕೆ ಕೇಂದ್ರದಿಂದ ಬರುವಷ್ಟು ಹಣ ಬಂದಿದೆ. ರಾಜ್ಯದ ರೈಲ್ವೆ ಯೋಜನೆಗಳಿಗೆ ಯುಪಿಎ ಅವಧಿಯಲ್ಲಿ 5 ಸಾವಿರ ಕೋಟಿ ರೂ. ಘೋಷಣೆ ಆಗಿತ್ತು. ಬಿಡುಗಡೆಯಾಗಲಿಲ್ಲ.

ನಮ್ಮ ಅವಧಿಯಲ್ಲಿ ಪ್ರತಿ ವರ್ಷ ಅದಕ್ಕಿಂತ ಹೆಚ್ಚು ಹಣ ರಾಜ್ಯಕ್ಕೆ ಬಂದಿದೆ. ರಾಜ್ಯ ಸರ್ಕಾರ ತಮ್ಮ ಲೋಪ ಮುಚ್ಚಿಕೊಳ್ಳಲು ಎಂಪಿಗಳ ವಿರುದ್ಧ ಆರೋಪ ಮಾಡುತ್ತಿದ್ದಾರೆ ಎಂದು ಹೇಳಿದರು.

## ಮೃತನ ವಿವರ ಪತ್ತೆಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಅ. 24ರಂದು ಕೊಪ್ಪಳ ರೈಲ್ವೆ ನಿಲ್ದಾಣದಲ್ಲಿ ಸುಮಾರು 45-50 ವರ್ಷದ ಓರ್ವ ಅಪರಿಚಿತ ಗಂಡಸು ಯಾವುದೋ ರೈಲುಗಾಡಿಯ ಮುಂದೆ ಬಿದ್ದು ಮೃತಪಟ್ಟಿದ್ದು, ಈ ಸಂಬಂಧ ಗದಗ ರೈಲ್ವೆ ಪೊಲೀಸ್ ಠಾಣೆ ಯುಡಿಆರ್ ನಂ: 42/2025, ಕಲಂ 194 ಬಿ.ಎನ್.ಎಸ್.ಎಸ್-2023 ರೀತ್ಯಾ ಪ್ರಕರಣ ದಾಖಲಾಗಿದೆ.

ಮೃತನ ಚಹರೆ ವಿವರ: ದುಂಡನೆಯ ಮುಖ, ನೀಟಾದ ಮೂಗು, ಸಾದಾಗಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಸುಮಾರು 5




ಅಡಿ 5 ಇಂಚು ಎತ್ತರ, ತಲೆಯಲ್ಲಿ ಸುಮಾರು 1/2 ಇಂಚಿನಷ್ಟು ಕಪ್ಪು ಮತ್ತು ಬಿಳಿ ಕೂದಲು, ಸುಮಾರು 1/2 ಇಂಚಿನಷ್ಟು ಕಪ್ಪು ದಾಡಿ-ಮೀಸೆ ಬಿಟ್ಟಿರುತ್ತಾನೆ. ಮೃತನು ಒಂದು ಬಿಳಿ ಬಣ್ಣದ ತುಂಬು ತೋಳಿನ ಶರ್ಟ್, ಒಂದು ಬಿಳಿ ಬಣ್ಣದ ಟಿ-ಶರ್ಟ್, ಒಂದು ಕಪ್ಪು ಮತ್ತು ಬಿಳಿ ಗೆರೆಯುಳ್ಳ ನೀಲಿ ಬಣ್ಣದ ಲುಂಗಿ ಧರಿಸಿರುತ್ತಾನೆ.

ಸದರ ಪ್ರಕರಣದಲ್ಲಿ ಮೃತನು ಅಪರಿಚಿತನಿದ್ದು, ಯಾರಿಗಾದರೂ ವಿವರಗಳು ತಿಳಿದುಬಂದಲ್ಲಿ ಗದಗ ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ-08372-278744, ಮೊ.ನಂ-9480802128 Email:gadagrly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ-080- 22871291 ಇಲ್ಲಿಗೆ ತಿಳಿಸಲು ಪ್ರಕಟಣೆ ಕೋರಿದೆ.

**ಕಸಾಪ ಆಜೀವ ಸದಸ್ಯರ ಸಭೆ | ಸಭೆಗೆ ಆಹ್ವಾನ ನೀಡಿದರೂ ಗೈರಾದ ಕಸಾಪ ತಾಲೂಕಾಧ್ಯಕ್ಷ**

## ಜಿಲ್ಲಾಧ್ಯಕ್ಷರಿಗೆ ಲಿಖಿತ ಮನವಿ ಸಲ್ಲಿಸಲು ನಿರ್ಧಾರ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್‌ನಲ್ಲಿ ಕಾರ್ಯಕ್ರಮಗಳು ನಡೆಯುತ್ತಿಲ್ಲ. ಸಮ್ಮೇಳನದ ಲೆಕ್ಕ ಮಂಡಿಸಿಲ್ಲ ಮತ್ತು ಸರ್ವಾಧಿಕಾರಿ ಧೋರಣೆ ಖಂಡಿಸಿ ಮೈಸೂರು ಮಠದಲ್ಲಿ ಕನ್ನಡ ಸಾಹಿತ್ಯ ಪರಿಷತ್‌ನ ಆಜೀವ ಸದಸ್ಯರ ಬಳಗದಿಂದ ಸಭೆ ನಡೆಯಿತು.

ಈ ವೇಳೆ ಆಜೀವ ಸದಸ್ಯ ಬಸವರಾಜ ಶೀಲವಂತರ ಮಾತನಾಡಿ, 2021-22ನೇ ಸಾಲಿನಲ್ಲಿ ಹೊಸದಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧಿಕಾರ ಸ್ವೀಕರಿಸಿ ಅಮರೇಶ್ ಗಾಣಗೇರ್ ಅವರು ತಾಲೂಕಿನ ಜವಾಬ್ದಾರಿ ಹೊತ್ತುಕೊಂಡ ಬಳಿಕ ಕನ್ನಡ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳನ್ನು ನಡೆಸದೇ, ಗ್ರಾಮ, ಹೋಬಳಿ ಘಟಕಗಳನ್ನು ಕ್ರೀಯಾಶೀಲವಾಗಿ ಕಟ್ಟದೇ, ಇಡೀ ತಾಲೂಕಿನಲ್ಲಿ ಸಾಹಿತ್ಯದ ಚಟುವಟಿಕೆಗಳನ್ನು ನಿಷ್ಕ್ರಿಯಗೊಳಿಸಿ, ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳದೇ ಏಕಪಕ್ಷೀಯವಾಗಿ ನಡೆದುಕೊಳ್ಳುತ್ತಾ, ಹೆಸರಿಗೆ ಮಾತ್ರ ಎಂಬಂತಾಗಿದೆ. ತಮ್ಮ ಅಧಿಕಾರವನ್ನು ನಿಭಾಯಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದ್ದು, ಇಡೀ ಸಮಿತಿ ನಿಷ್ಕ್ರಿಯಗೊಂಡಿದೆ. ಇಂತಹ ಸರ್ವಾಧಿಕಾರಿ ಧೋರಣೆಯ ಅಧ್ಯಕ್ಷರನ್ನು ಕೂಡಲೇ ಬದಲಾವಣೆ ಮಾಡುವಂತೆ ಒತ್ತಾಯಿಸಿದರು.

ಕಸಾಪ ಮಾಜಿ ಅಧ್ಯಕ್ಷ ಆರ್.ಕೆ. ಬಾಗವಾನ ಮಾತನಾಡಿ, ಗದಗ ಜಿಲ್ಲೆಯ 10ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕಾಗಿ ಸಾರ್ವಜನಿಕವಾಗಿ ಹಣ ಸಂಗ್ರಹ ಮಾಡಿದ್ದು, ಇದುವರೆಗೂ ಅದರ ಲೆಕ್ಕಪತ್ರವನ್ನು ನೀಡಿಲ್ಲ. ಜೊತೆಗೆ ಗಜೇಂದ್ರಗಡ ತಾಲೂಕಿನ ಪ್ರಥಮ ಸಮ್ಮೇಳನ ಕಾಟಾಚಾರಕ್ಕೆ ಎಂಬಂತೆ ಮಾಡಿ ಮುಗಿಸಿ ಕೈತೊಳೆದುಕೊಂಡರು. ಅದರ ಬಗ್ಗೆಯೂ ಲೆಕ್ಕಪತ್ರವಿಲ್ಲ. ಕೂಡಲೇ ಈ ಬಗ್ಗೆ ಉತ್ತರ ನೀಡಬೇಕು ಎಂದರು.

> ಕಸಾಪ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಮಾತನಾಡಿ, ಯಾವುದೇ ನಿರಂತರ ಕಾರ್ಯಕ್ರಮ ನಡೆಯದೇ, ಇಡೀ ಸಾಹಿತ್ಯ ವಲಯವನ್ನು ಕತ್ತಲೆಗೆ ದೂಡಿರುವುದು ಈ ಭಾಗದ ಸಾಹಿತ್ಯ ಪ್ರಿಯರಿಗೆ ಸಾಕಷ್ಟು ನೋವುಂಟುಮಾಡಿದೆ. ಹೀಗಾಗಿ ಆಜೀವ ಸದಸ್ಯರೆಲ್ಲ ಸೇರಿ ಚರ್ಚೆ ನಡೆಸಿ, ಈ ವಿಷಯಗಳಿಗೆ ಸಂಬಂಧಿಸಿದಂತೆ ಜಿಲ್ಲಾಧ್ಯಕ್ಷರು ಸ್ಪಷ್ಟೀಕರಣ ನೀಡುವಂತೆ ಚರ್ಚಿಸಲಾಗಿದೆ. ನಿಷ್ಕ್ರಿಯ ಅಧ್ಯಕ್ಷರನ್ನು ಬದಲಾವಣೆ ಮಾಡಿ, ಕ್ರಿಯಾಶೀಲ ಸಮಿತಿಯನ್ನು ರಚಿಸಲು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆಜೀವ ಸದಸ್ಯ ಬಸವರಾಜ ಕೊಟಗಿ, ಎಂ.ಬಿ. ಸೊಂಪೂರ, ಗಣೇಶ ರಾಠೋಡ ಮಾತನಾಡಿದರು. ಹುಚ್ಚಪ್ಪ ಹಾವೇರಿ, ರೇಣುಕಾ ಇಟಗಿ, ಸುರೇಶ ಪತ್ತಾರ, ಚೈತ್ರಾ ವಿಶ್ವಬ್ರಾಹ್ಮಣ, ಮೌನೇಶ ವಿಶ್ವಬ್ರಾಹ್ಮಣ, ಉಸ್ಮಾನಗಣಿ ಹಿರೇಹಾಳ, ಕೆ.ಎಸ್. ಸಾಲಿಮಠ, ಮುರ್ತುಜಾ ಮಳಗಾವಿ, ಡಾ. ಮಹಾಂತೇಶ ಅಂಗಡಿ, ಶಿವಾಜಿ ಹೊರಪೇಟೆ, ಗವಿಸಿದ್ದಪ್ಪ ಭೋಸಲೆ, ರವಿಚಂದ್ರ ಗಾರ್ಗಿ, ಬಿ.ಎ. ಅಂಗಡಿ, ಮಹಾಂತೇಶ ಮಳಗಿ, ಲಿಲತಾ ವಿಶ್ವಬ್ರಾಹ್ಮಣ, ಶರಣಪ್ಪ ಪಟ್ಟೆದ, ವ್ಹಿ.ವ್ಹಿ. ನೂಲ್ವಿ, ಕೆ.ಎಸ್. ಜಂತ್ಲಿ ಸೇರಿದಂತೆ ಆಜೀವ ಸದಸ್ಯರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka